ವಿಜಯಪುರ | ಸಂಪುಟ 02 | ಸಂಚಿಕೆ 124 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಜುಲೈ 06, 2024

“ಬಾಲ ಮಂದಿರದಲ್ಲಿರುವ ಮಕ್ಕಳ ಬದುಕು ಹಸನಾಗಿಸುವ ಕೆಲಸ ನಾವೆಲ್ಲ ಮಾಡಬೇಕಿದೆ. ಅಧಿಕಾರಿಗಳು ಸರಕಾರದ ಸೌಲಭ್ಯಗಳನ್ನು ಮಕ್ಕಳಿಗೆ ಸಮರ್ಪಕವಾಗಿ ತಲುಪಿಸಬೇಕು. ಅವರನ್ನು ಸದೃಢ ನಾಗರಿಕರನ್ನಾಗಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರದು.”

ಉದಯರಶ್ಮಿ ದಿನಪತ್ರಿಕೆ



– ಸಂಗಮೇಶ ಬಬಲೇಶ್ವರ

ಅಧ್ಯಕ್ಷರು, ಕರ್ನಾಟಕ ಬಾಲ ವಿಕಾಸ ಅಕಾಡೆಮಿ

ವಿರೋಧ ಪಕ್ಷಗಳ ಆರೋಪದಲ್ಲಿ ಹುರುಳಿಲ್ಲ | ಎಸ್ಸಿಎಸ್ಪಿ-ಟಿಎಸ್ಪಿ ಅನುದಾನ ಆಯಾ ವರ್ಷವೇ ಖರ್ಚು ಮಾಡಬೇಕೆಂದ ಸಿಎಂ ಸಿದ್ದರಾಮಯ್ಯ

# ಗ್ಯಾರಂಟಿ ಯೋಜನೆಗೆ ದಲಿತರ ಅಭಿವೃದ್ಧಿ ಹಣ ಬಳಸಿಲ್ಲ :ಸಿಎಂ

ಬೆಂಗಳೂರು: ರಾಜ್ಯ ಸರ್ಕಾರ ತನ್ನ ಗ್ಯಾರಂಟಿ ಯೋಜನೆಗಳಿಗೆ ದಲಿತರ ಅಭಿವೃದ್ಧಿ ಮೀಸಲಿಟ್ಟಿರುವ ಖಅಕ, ಖಿಖಕ ಅನುದಾನ ಬಳಕೆ ಮಾಡುತ್ತಿದೆ ಎಂಬ ಆರೋಪಕ್ಕೆ ಸಿಎಂ ಸಿದ್ದರಾಮಯ್ಯ ಶುಕ್ರವಾರ ಸ್ಪಷ್ಟನೆ ನೀಡಿದ್ದು, ಆರೋಪದಲ್ಲಿ ಹುರುಳಿಲ್ಲ ಎಂದು ಹೇಳಿದ್ದಾರೆ.

ಶುಕ್ರವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ರಾಜ್ಯ ಪರಿಷತ್ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, “ದಲಿತ ಸಮುದಾಯದ ಕಲ್ಯಾಣಕ್ಕಾಗಿ ಮೀಸಲಿಟ್ಟಿರುವ ಎಸ್ಸಿಎಸ್ಪಿ-ಟಿಎಸ್ಪಿ ಅಡಿ ಅನುದಾನ ಆಯಾ ವರ್ಷವೇ ಖರ್ಚು ಮಾಡಬೇಕು. ಈ ಸಂಬಂಧ ನಿರ್ಲಕ್ಷ್ಯ ತೋರಿಸಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳನ್ನು ಎಚ್ಚರಿಸಿದ್ದಾರೆ.

ಅಂತೆಯೇ “ಇಡೀ ದೇಶದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ಮೀಸಲಿಡಲು ಎಸ್ಸಿಎಸ್ಪಿ-ಟಿಎಸ್ಪಿ ಕಾಯ್ದೆ ಮಾಡಿರುವುದು ನಮ್ಮ ಸರ್ಕಾರ ಮಾತ್ರ. ಇದರಿಂದ 2024-25ನೆ ಸಾಲಿಗೆ ಎಸ್ಸಿ-ಎಸ್ಪಿ-ಟಿಎಸ್ಪಿ ಅಡಿ ಒಟ್ಟಾರೆ 39,121 ಕೋಟಿ ರೂ.ಅನುದಾನ ಒದಗಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದಲ್ಲಿ ಇದು ಶೇ.11ರಷ್ಟು ಅಂದರೆ 3,897 ಕೋಟಿ ರೂ.ಹೆಚ್ಚಳವಾಗಿದೆ. ಎಸ್ಸಿಎಸ್ಪಿ ಅಡಿ 27,673.96 ಕೋಟಿ ರೂ.ಹಾಗೂ ಟಿಎಸ್ಪಿ ಅಡಿ 11447.50 ಕೋಟಿ ರೂ. ಒದಗಿಸಲಾಗಿದೆ.



ಈ ವರ್ಷದ ಕ್ರಿಯಾ ಯೋಜನೆಯಲ್ಲಿ ಮುಖ್ಯವಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ 8,480 ಕೋಟಿ ರೂ., ಇಂಧನ ಇಲಾಖೆಗೆ 5026 ಕೋಟಿ, ಸಮಾಜ ಕಲ್ಯಾಣ ಇಲಾಖೆಗೆ 4,174 ಕೋಟಿ ರೂ., ಕಂದಾಯ ಇಲಾಖೆಗೆ 3,403 ಕೋಟಿ ರೂ., ಗ್ರಾಮೀಣಾಭಿವೃದ್ಧಿ ಇಲಾಖೆಗೆ 3,163 ಕೋಟಿ ರೂ. ಒದಗಿಸಲಾಗಿದೆ ಎಂದರು.

ಅಲ್ಲದೆ ಕಳೆದ ವರ್ಷ 35221.84 ಕೋಟಿ ರೂ. ಆಯವ್ಯಯ ಹಂಚಿಕೆಗೆ ಎದುರಾಗಿ ಶೇ.97.23ರಷ್ಟು ಹಣ ಬಿಡುಗಡೆಗೆಯಾಗಿದ್ದು, ಅದರಲ್ಲಿ ಶೇ.99.64ರಷ್ಟು ಸಾಧನೆಯಾಗಿದೆ. ಈ ಅನುದಾನ ಯಾವ ಕಾರಣಕ್ಕೂ ಬಳಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಇನ್ನು ಉಳಿಕೆ ಹಣ ವ್ಯಯವಾಗಬಾರದು. ಅದೇ ವರ್ಷ ವೆಚ್ಚವಾಗಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ನಿಗಮಗಳಲ್ಲಿ ಹಣ ವೆಚ್ಚವಾಗಿಲ್ಲ. ಇದಕ್ಕೆ ಶಾಸಕರು ಪಟ್ಟಿ ಕೊಡಲಿಲ್ಲ ಎಂಬ ಕಾರಣ ನೀಡುತ್ತಾರೆ.

ನಿಗಮಗಳ ಅಧ್ಯಕ್ಷರು ಹಾಗೂ ಸಂಬಂಧಿಸಿದ ಸಚಿವರು, ಶಾಸಕರು ಫಲಾನುಭವಿಗಳ ಪಟ್ಟಿ ಒದಗಿಸುವಂತೆ ಮನವೊಲಿಸಬೇಕು. ಈ ಯೋಜನೆಗಳ ಮೌಲ್ಯಮಾಪನದಿಂದ ಶೇ.65 ರಷ್ಟು ಉಪಯೋಗವಾಗಿರುವುದು ಕಂಡು ಬರುತ್ತದೆ. ಸೆಕ್ಷನ್ 7(ಡಿ) ಕೈಬಿಡಲಾಗಿದೆ. ಇದರಿಂದಾಗಿ ಈ ಯೋಜನೆಯ ಸಂಪೂರ್ಣ ವೆಚ್ಚ ಈ ಸಮುದಾಯದವ-ರಿಗೇ ಬಳಕೆಯಾಗಲಿದೆ ಎಂದು ಸಿದ್ದರಾಮಯ್ಯ ವಿವರಿಸಿದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಡಾ.ಎಚ್.ಸಿ.ಮಹದೇವಪ್ಪ, ಎಚ್.ಕೆ.ಪಾಟೀಲ್, ಪ್ರಿಯಾಂಕ್ ಖರ್ಗೆ, ಶಾಸಕರಾದ ಪ್ರಸಾದ್ ಅಬ್ಬಯ್ಯ, ಬಸಂತಪ್ಪ, ಶ್ರೀನಿವಾಸ್, ಪಿ.ಎಂ.ನರೇಂದ್ರಸ್ವಾಮಿ, ಕೃಷ್ಣಾ ನಾಯಕ್, ಪರಿಷತ್ ಸದಸ್ಯ ಪ್ರಕಾಶ್ ರಾಥ-ೋಡ್, ಸಂಸದ ಸುನಿಲ್ ಬೋಸ್, ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ರಜನೀಶ್ ಗೋಯೆಲ್, ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತೆ ಡಾ.ಶಾಲಿನಿ ರಜನೀಶ್ ಗೋಯೆಲ್, ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಪಿ.ಮಣಿವಣ್ಣನ್ ಹಾಗೂ ವಿವಿಧ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

## ನಿರ್ಲಕ್ಷ್ಯ ವಹಿಸಿದರೆ ಕ್ರಮ


ಪರಿಶಿಷ್ಟ ಅನುದಾನ ಸದ್ಬಳಕೆಯಲ್ಲಿ ಶೇ.100 ಸಾಧನೆ ಆಗಬೇಕು. ಇದರಲ್ಲಿ ನಿರ್ಲಕ್ಷ್ಯ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗುತ್ತದೆ. ಎಸ್ಸಿಪಿ-ಟಿಎಸ್ಪಿ ಕಾಯ್ದೆಯಲ್ಲಿದ್ದ 7 ‘ಡಿ’ ರದ್ದು ಮಾಡಿದ ರೀತಿಯಲ್ಲೇ 7 ‘ಸಿ’ ಕೂಡ ರದ್ದು ಮಾಡಬೇಕು ಎನ್ನುವ ಶಾಸಕ ನರೇಂದ್ರಸ್ವಾಮಿ ಸಲಹೆ ನೀಡಿದ್ದಾರೆ. ಈ ಸಲಹೆಯ ಸಾಧಕ-ಭಾದಕಗಳನ್ನು ಪರಿಶೀಲಿಸಲಾಗುವುದು’ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

## ರಾಜ ನುಡಿ

ನಮ್ಮದೇ ದೇಹದ ಅನ್ನನಾಳದಿಂದ ಚಿಕ್ಕ ಅನ್ನದಗುಳು, ಆಕಸ್ಮಿಕವಾಗಿ ಶ್ವಾಸಕೋಶದೊಳ ಹೋದರೆ, ಅದು ಒಪ್ಪಿಕೊಳ್ಳದೆ ಹೊರನಡೆ ಎಂದು ಕೆಮ್ಮು ಅಥವಾ ಬಿಕ್ಕಳಿಕೆ ಪ್ರಾರಂಭಿಸುತ್ತದೆ. ಹೀಗಿರುವಾಗ ಹೇರಿಕೆಯಾಗುವ ನಮಗೆ ಸರಿಹೊಂದದ ಇನ್ನೊಬ್ಬರ ಮಾತುಗಳು, ವಿಚಾರಗಳನ್ನು ನಮ್ಮೊಳಗೆ ಖಂಡಿತ ಇಳಿಯಲು ಬಿಡಬಾರದು.

–ಡಾ. ರಾಜಶೇಖರ ನಾಗೂರ

## ವಚನ ಚಿಂತನ



*ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ?*
*ಸಜ್ಜನಿಕೆಯುಳ್ಳಡೆ ಪ್ರಸಾದಕಾಯ ಕೆಡುವುದೆ ?*
*ಪ್ರಾಣ, ಲಿಂಗವಾದಡೆ ಪ್ರಾಣ ಬೇರಪ್ಪುದೆ ?*
*ಪ್ರಾಣಲಿಂಗ ಪ್ರಸಾದವನು ತಿಳಿದು ನೀವು ನೋಡಿರೆ,*
*ನಾದ ಬಿಂದು ಸೂಸದ ಮುನ್ನ,*
*ಆದಿಯ ಪ್ರಸಾದವ ಭೇದಿಸಿಕೊಂಡರು*
*ಗುಹೇಶ್ವರಾ ನಿಮ್ಮ ಶರಣರು.*

ಬಸವಾದಿ ಶರಣರು ರೋಗಗಳ ಬಗ್ಗೆ ವೈಜ್ಞಾನಿಕ ಅರಿವನ್ನು ಹೊಂದಿದ್ದರು ಎಂಬುದಕ್ಕೆ ಈ ವಚನದಲ್ಲಿ ಅಲ್ಲಮಪ್ರಭುಗಳು ಅನೇಕ ಸಾಕ್ಷಿಗಳನ್ನು ತೆರೆದಿಟ್ಟಿದ್ದಾರೆ. ರೋಗಗಳ ಉಗಮ ಮತ್ತು ಹರಡುವಿಕೆಗೆ ದೈವಶಕ್ತಿಯೇ ಕಾರಣವೆಂದು ಅದರ ಸಂತೃಪ್ತಿಗಾಗಿ ಪ್ರಾಣಿಬಲಿಯಂತಹ ಮೂಢ ಆಚರ ಣೆಗಳನ್ನು ಆಚರಿಸುವ ಆ ಕಾಲಘಟ್ಟದಲ್ಲಿ ಅಂತಹ ನಂಬಿಕೆಯನ್ನು ಹೊಡೆ ದೋಡಿಸಿ ರೋಗನಿವಾರಣೆಗೆ ಸೂಕ್ತ ಮುದ್ದು ಪಡೆಯುವಂತೆ ಜನರಲ್ಲಿ ಜಾಗೃತಿ ಮೂಡಿಸಿರುವುದನ್ನು ವಚನದ ಪ್ರಾರಂಭದ ಸಾಲಿನಲ್ಲಿ ನಾವು ಕಾಣುತ್ತೇವೆ.”ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ ?” ಎನ್ನುವಲ್ಲಿ ತಾವು ಸೇವಿಸುವ ಮದ್ದು /ಔಷದ ಬಗ್ಗೆ ನಂಬಿಕೆ ತಾಳುವಂತೆ ಸೂಚಿಸಿದ್ದಾರೆ.ರೋಗನಿವಾರಣೆ ಕಾರ್ಯದಲ್ಲಿ ಔಷಧದ ಬಗ್ಗೆ ರೋಗಿ ತಾಳುವ ಧನಾತ್ಮಕ ನಂಬಿಕೆಯು ಸಾಕಷ್ಟು ಪರಿಣಾಮ ಬೀರುತ್ತದೆ ಎಂಬುದನ್ನು ವೈದ್ಯರು ಒಪ್ಪಿಕೊಂ ಡಿದ್ದಾರೆ. ನಮ್ಮ ಆಚಾರ-ವಿಚಾರಗಳು ಉತ್ತಮವಾಗಿದ್ದರೆ ಯಾವು ದೇ ರೋಗಗಳು ಬಾಧಿಸುವುದಿಲ್ಲ ಎಂಬುದನ್ನು “ಸಜ್ಜನಿಕೆಯುಳ್ಳ ಡೆ ಪ್ರಸಾದಕಾಯ ಕೆಡುವುದೆ ?”ಇಂದು ಪ್ರಶ್ನಿಸುವುದರ ಮೂಲಕ ನಡೆ-ನುಡಿ ಸೂಚಿಯಾಗಿರುವಂತೆ ಸಲಹೆ ನೀಡಿದ್ದಾರೆ.ಕಾಯವನ್ನು ಪ್ರಸಾ ದಕಾಯ ಮಾಡಿಕೊಂಡಾಗ ಕಾಯಕ್ಕೆ ತಗುಲುವ ರೋಗ ರುಜಿನಗಳು ಕಡಿ ಮೆಯಾಗಿ ಪ್ರಾಣವು ಪರಿಶುದ್ಧವಾಗುವದು ಪರಿಣಾಮವಾಗಿ ಗುಹೇಶ್ವರನ ಶರಣರು ಅಂಗಭಾವವನ್ನು ಅಳಿದು ಲಿಂಗ ಭಾವದಲ್ಲಿ ನಿಶ್ಚಿಂತರಾಗಿದ್ದ ರು ಎಂದಿದ್ದಾರೆ.ಯಾವುದೇ ರೋಗಗಳ ಬಗ್ಗೆ ಆತಂಕಗೊಳ್ಳ ದೆ ಸೂಕ್ತ ಚಿಕಿತ್ಸೆಯನ್ನು ಪಡೆದು ಮುದ್ದು ಸೇವಿಸಿದರೆ ಅಂಗಕ್ಕೆ ಬರುವ ರೋಗಗಳು ನಿವಾರಣೆಯಾಗುತ್ತವೆ ಎಂಬುದೇ ಈ ವಚನದ ಆಶಯವಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಜಮೀನು ದಾರಿ ಸಮಸ್ಯೆ ಅಧಿವೇಶನದಲ್ಲಿ ಚರ್ಚಿಸಲು ರೈತಸಂಘ ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಜು.15 ರಂದು ಪ್ರಾರಂಭವಾಗಲಿರುವ ವಿಧಾನಸಭಾ ಅಧಿವೇಶನದಲ್ಲಿ ಜಮೀನು ದಾರಿ ವಿಷಯವನ್ನು ಚರ್ಚಿಸಿ ಸೂಕ್ತ ಕಾನೂನು ತಿದ್ದುಪಡಿ ಮಾಡಿ ತಹಶೀಲ್ದಾರುಗಳಿಗೆ ದಾರಿ ಮಾಡಿಕೊಡಬೇಕೆಂದು ಒತ್ತಾಯಿಸಿ ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ. ಖಾದರ ಅವರಿಗೆ ಬರೆದ ಪತ್ರವನ್ನು ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿಯವರ ಮುಖಾಂತರ ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಘಟಕದ ವತಿಯಿಂದ ಶುಕ್ರವಾರದಂದು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ರಾಜ್ಯದ ರೈತರು ತಮ್ಮ ತಮ್ಮ ಜಮೀನುಗಳಿಗೆ ಹೋಗಲು ಮುಂದಿನ ರೈತರು ದಾರಿ ಕೊಡದ ಕಾರಣ ಜಮೀನು ಬಿತ್ತನೆ ಮಾಡದೆ ಜಮೀನು ಬೀಳು ಬಿದ್ದು ರೈತ ಕುಟುಂಬಗಳು ಉಪವಾಸ ಬೀಳುವ ಪರಸ್ಥಿತಿ ನಿರ್ಮಾಣವಾಗಿದೆ ಈ ವಿಷಯವಾಗಿ ಕಳೆದ 10 ವರ್ಷಗಳಿಂದ ಹೋರಾಟ ಮಾಡಿ ಸರಕಾರ ಗಮನ ಸೆಳೆಯಲಾಗಿತ್ತು ನಂತರ ಸರಕಾರ ಕಾಟಾಚಾರಕ್ಕೆ ಎಂಬಂತೆ ಸುತ್ತೋಲೆ ಹೊರಡಿಸಿದೆ. ಆದರೆ ರಾಜ್ಯದ ಯಾವೊಬ್ಬ ತಹಶೀಲ್ದಾರಗಳು ದಾರಿ ಮಾಡಿಕೊಟ್ಟ





ಉದಾಹರಣೆ ಇಲ್ಲ ತಹಶೀಲ್ದಾರಗಳನ್ನು ಕೇಳಿದರೆ ಸರಕಾರದ ಸುತ್ತೋಲೆಯಲ್ಲಿ ಸ್ಪಷ್ಟವಾಗಿ ದಾರಿ ಮಾಡಿಕೊಡಲು ಆದ-ೇಶ ವಿಲ್ಲ ಆದ್ದರಿಂದ ಮಾಡಿಕೊಡಲು ಸಾಧ್ಯವಿಲ್ಲವೆಂದು ರೈತರಿಗೆ ಹೇಳುತಿದ್ದಾರೆ. ಇದರಿಂದ ಸರಕಾರದ ಸುತ್ತೋಲೆಗೆ ಬೆಲೆ ಇಲ್ಲದಂತಾಗಿದೆ. ಆದ್ದರಿಂದ ಜುಲೈ 15 ರಂದು ಪ್ರಾರಂಭವಾಗಲಿರುವ ವಿಧಾನ ಸಭಾ ಅಧಿವೇಶನದಲ್ಲಿ ಜಮೀನು ದಾರಿ ವಿಷಯವನ್ನು ಚರ್ಚಿಸಿ ಸೂಕ್ತ ಕಾನೂನು ತಿದ್ದುಪಡಿ ಮಾಡಿ ತಹಶೀಲ್ದಾರುಗಳಿಗೆ ದಾರಿ ಮಾಡಿಕೊಡುವ ಅಧಿಕಾರವನ್ನು ವಹಿಸಿಕೊಡಬೇಕು ನ್ಯಾಯಾಲಯಕ್ಕೆ ಹೋಗಿ ತಡೆಯಾಜ್ಞೆ ತರದಂತೆ ಕಾನೂನು ತಿದ್ದುಪಡಿ ಮಾಡಬೇಕೆಂದು ಮತ್ತು ಕರ್ನಾಟಕ ವಿಧಾನಸಭೆ ಅರ್ಜಿಗಳ ಸಮೀತಿ ಈ ಗಂಭೀರ ಸಮಸ್ಯೆಯನ್ನು ಅಧಿವೇಶನದಲ್ಲಿ ಚರ್ಚಿಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಚನ್ನಬಸಪ್ಪ ಸಿಂಧೂರ, ದಾವಲಸಾಬ ನದಾಫ್, ವಿಠ್ಠಲ ಬಿರಾದಾರ, ಸಿದ್ದಪ್ಪ ಕಲಬಿಳಗಿ, ಪ್ರಭು ಬಸ್ತವಾಡ, ಗಿರಿಮಲ್ಲಪ್ಪ ದೊಡಮನಿ, ಶೇಖಪ್ಪ ಖರಾಬಿ, ಶರಣಪ್ಪ ಹಿಪ್ಪರಗಿ, ಶ್ರೀಕಾಂತ ಹಾದಿಮನಿ, ಈರಣ್ಣ ಶಿರಸಂಗಿ, ಶಿವಪ್ಪ ಸುಂಟ್ಯಾನ, ಹನಮಂತ ಮುರಾಳ, ಶಿವಪ್ಪ ಮುರಾಳ ಮುಂತಾದವರು ಇದ್ದರು.

# ಮಣ್ಣೆತ್ತಿನ ಅಮಾವಾಸ್ಯೆ: ಕುಸಿದ ಮಣ್ಣೆತ್ತಿನ ಬೇಡಿಕೆ

ಉದಯರಶ್ಮಿ ನ್ಯೂಸ್

ವಿಜಯಪುರ: ರೈತರು ಮಣ್ಣೆತ್ತಿನ ಅಮವಾಸ್ಯೆಯ ದಿನ ಕುಂಬಾರರು ಮಣ್ಣಿನಿಂದ ತಯಾರಿಸಿದ ಜೋಡಿ ಎತ್ತುಗಳನ್ನು ತಂದು ಪೂಜಿಸುವ ದೃಶ್ಯ ತಾಲೂಕಿನ ನಾಗಠಾಣ ಗ್ರಾಮದಲ್ಲಿ ಕಂಡುಬಂತು.

ರೈತರಿಗೆ ಎತ್ತುಗಳು ಕಣ್ಣುಗಳಿದ್ದಂತೆ. ಮಣ್ಣು ಕೂಡಾ ದೇವ ಸ್ವರೂಪಿ. ಎತ್ತುಗಳು ಜಮೀನಿನಲ್ಲಿ ರೈತನಿಗಾಗಿ ಹಗಲಿರಳು ದುಡಿದರೆ, ಭೂತಾಯಿ ರೈತನಿಗೆ ಅನ್ನ ನೀಡುತ್ತಾಳೆ. ಹೀಗಾಗಿ ಮಣ್ಣು ಮತ್ತು ಎತ್ತುಗಳನ್ನು ರೈತರು ಪೂಜನೀಯ ಭಾವದಿಂದ ಕಾಣುತ್ತಾರೆ. ಮುಂಗಾರು ಮಳೆ ಪ್ರಾರಂಭದ ನಂತರ ಬರುವ ಕಾರ ಹುಣ್ಣಿಮೆ ಮತ್ತು ಮಣ್ಣೆತ್ತಿನ ಅಮಾವಾಸ್ಯೆಯಂದು ರೈತರು ತಮ್ಮ ನೋವು ನಲಿವುಗಳನ್ನು ಬದಿಗಿಟ್ಟು, ಎತ್ತುಗಳನ್ನು ಪೂಜಿಸಿ, ಸಂಭ್ರಮಿಸುವ ಪದ್ಧತಿ ತಾಲೂಕಿನ ನಾಗಠಾಣ ಗ್ರಾಮದಲ್ಲಿ ಈಗಲೂ ಚಾಲ್ತಿಯಲ್ಲಿದೆ.

ಕಪ್ಪುಎರೆ ಮಣ್ಣಿನಿಂದ ತಯಾರಿಸಿದ ಮಣ್ಣೆತ್ತುಗಳಿಗೆ ಮಾರುಕಟ್ಟೆಯಲ್ಲಿ ಬೇಡಿಕೆ ಕಡಿಮೆಯಾಗಿ, ನಮ್ಮ ಬದುಕು ಕಷ್ಟಕರವಾಗಿದೆ. ಪ್ಲಾಸ್ಟರ್ ಆಫ್ ಪ್ಯಾರಿಸ್, ವೈಟ್ ಸಿಮೆಂಟ್‌ನ ಬಣ್ಣ ಬಣ್ಣದ ವಿವಿಧ ನಮೂನೆಯ ಚಿತ್ತಾಕರ್ಷಕ ಎತ್ತುಗಳ ಬೊಂಬೆಗಳು ಈಗ ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದು, ಪರಿಸರ ಸ್ನೇಹಿ ಮಣ್ಣಿನ ಎತ್ತುಗಳಿಗೆ ಬೇಡಿಕೆ ಕಡಿಮೆಯಾಗಿದೆ ಎಂದು ಮಲ್ಲಿಕಾರ್ಜುನ ಕುಂಬಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಮಣ್ಣೆತ್ತಿನ ಅಮಾವಾಸ್ಯೆಯ ಎರಡು ತಿಂಗಳ ಮುಂಚೆ ಜೇಡಿ ಮಣ್ಣು, ಕಪ್ಪು ಎರೆ ಮಣ್ಣು ತಂದು, ಹದ ಮಾಡಿ ಮನೆಯ



ಎಲ್ಲ ಸದಸ್ಯರು ಸೇರಿ ನೂರಾರು ಮಣ್ಣಿನ ಎತ್ತುಗಳನ್ನು ತಯಾರಿಸಿ ಮನೆಯಂಗಳದ ಖಾಲಿ ಜಾಗದಲ್ಲಿ ಆರಲು ಇಡುತ್ತಿದ್ದೆವು. ಗ್ರಾಮಸ್ತರು ಮುಗಿಬಿದ್ದು ಮಣ್ಣಿನ ಎತ್ತುಗಳನ್ನು ಒಯ್ಯುತ್ತಿದ್ದರು. ಆದರೆ ಈಗ ಆ ದೃಶ್ಯ ಅಪರೂಪ ಎನಿಸಿದೆ ಎಂದು ರಾಜು ಕುಂಬಾರ ತಿಳಿಸಿದರು.

ಮಣ್ಣಿನಿಂದ ಮಾಡಿದ ಎತ್ತುಗಳ ಜೋಡಿಗೆ ಕೇವಲ 100 ರೂ. ಬೆಲೆಯಿದ್ದು, ಮಣ್ಣಿನ ಎತ್ತುಗಳನ್ನು ಕೊಂಡುಕೆಣಟಿಜಜಜಿುಟಿಜಜಳ್ಳಲು ಹಿಂಜರಿಯುತ್ತಿರುವುದು ವಿಪರ್ಯಾಸ ಎಂದು ಪದ್ಮಾವತಿ ಕುಂಬಾರ ಬೇಸರ ವ್ಯಕ್ತಪಡಿಸಿದರು.

# 111 ಮಸಾಲೆ ತಯಾರಕರ ಪರವಾನಿಗೆ ರದ್ದುಗೊಳಿಸಿದ FSSAI

ಉದಯರಶ್ಮಿ ನ್ಯೂಸ್

ಬೆಂಗಳೂರು: ಕಳೆದ ಒಂದು ತಿಂಗಳ ಅವಧಿಯಲ್ಲಿ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ (ಎಫ್‌ಎಸ್‌ಎಸ್‌ಎಐ) ದೇಶಾದ್ಯಂತ 111 ಮಸಾಲೆ ಉತ್ಪಾದಕರ ಉತ್ಪಾದನಾ ಪರವಾನಗಿಯನ್ನು ರದ್ದುಗೊಳಿಸಿದೆ. ತಕ್ಷಣವೇ ಉತ್ಪಾದನೆಯನ್ನು ನಿಲ್ಲಿಸುವಂತೆ ಅವರಿಗೆ ಸೂಚನೆ ನೀಡಲಾಗಿದೆ ಎಂದು ವರದಿಗಳು ಹೇಳಿವೆ.

ಕಳೆದ ಎಪ್ರಿಲ್‌ನಲ್ಲಿ ಸಿಂಗಾಪುರ ಮತ್ತು ಹಾಂಗ್‌ಕಾಂಗ್ ಜನಪ್ರಿಯ ಭಾರತೀಯ ಬ್ರ್ಯಾಂಡ್‌ಗಳಾದ ಎಂಡಿಹೆಚ್ ಮತ್ತು ಎವರೆಸ್ಟ್ ಮಸಾಲೆಗಳ ಮಾರಾಟವನ್ನು ನಿಷೇಧಿಸಿದಾಗಿನಿಂದ ಎಫ್‌ಎಸ್‌ಎಸ್‌ಎಐ ದೇಶಾದ್ಯಂತದಿಂದ ಮಸಾಲೆ ಉತ್ಪನ್ನಗಳ ಸ್ಯಾಂಪಲ್‌ಗಳನ್ನು ಸಂಗ್ರಹಿಸುತ್ತಿದೆ. ಹಲವಾರು ಉತ್ಪನ್ನಗಳಲ್ಲಿ ಕ್ಯಾನ್ಸರ್‌ಕಾರಕ ಕೀಟನಾಶಕ ಎಥಿಲೀನ್ ಆಕ್ಸೈಡ್ ಪತ್ತೆಯಾದ ಬಳಿಕ ಸಿಂಗಾಪುರ ಮತ್ತು ಹಾಂಗ್‌ಕಾಂಗ್ ಈ ಬ್ರ್ಯಾಂಡ್‌ಗಳನ್ನು ನಿಷೇಧಿಸಿವೆ.

ಎಫ್‌ಎಸ್‌ಎಸ್‌ಎಐ ಈವರೆಗೆ 4,000 ಸ್ಯಾಂಪಲ್‌ಗಳನ್ನು ಸಂಗ್ರಹಿಸಿದ್ದು,ಈ ಪೈಕಿ ಸುಮಾರು 2,200 ಸ್ಯಾಂಪಲ್‌ಗಳನ್ನು





ಪರೀಕ್ಷೆಗಳಿಗೆ ಒಳಪಡಿಸಲಾಗಿದೆ. ಎಫ್-ಎಸ್‌ಎಸ್‌ಎಐ ಇನ್ನಷ್ಟು ಸ್ಯಾಂಪಲ್‌ಗಳ ಪರೀಕ್ಷೆಯನ್ನು ಮುಂದುವರಿಸಿರುವುದರಿಂದ ಮತ್ತಷ್ಟು ಪರವಾನಿಗೆಗಳು ರದ್ದಾಗುವ ಸಾಧ್ಯತೆಯಿದೆ.

ಈವರೆಗೆ ಪರವಾನಿಗೆ ರದ್ದುಗೊಂಡಿರುವ ಮಸಾಲೆ ಉತ್ಪನ್ನಗಳಲ್ಲಿ ಜನಪ್ರಿಯ ಬ್ರ್ಯಾಂಡ್‌ಗಳಾದ ಎವರೆಸ್ಟ್,-ಎಂಡಿಹೆಚ್,ಕ್ಯಾಚ್ ಮತ್ತು ಬಾದಶಾಹ್ ಸೇರಿವೆ.

ಪರವಾನಿಗೆಗಳು ರದ್ದುಗೊಂಡಿರುವ ಹೆಚ್ಚಿನ ಕಂಪನಿಗಳು ಕೇರಳ ಮತ್ತು ತಮಿಳುನಾಡಿಗೆ ಸೇರಿವೆ. ಗುಜರಾತ್, ಮಹಾರಾಷ್ಟ್ರ ಮತ್ತು ಮಧ್ಯ ಪ್ರದೇಶದ ಹಲವಾರು ಕಂಪನಿಗಳೂ ನಿಗಾದಲ್ಲಿವೆ. ಪರವಾನಿಗೆ ರದ್ದುಗೊಂಡಿರುವ ಹೆಚ್ಚಿನ ಕಂಪನಿಗಳು ಸಣ್ಣ ಪ್ರಮಾಣದ ಉದ್ಯಮಗಳಾಗಿವೆ.

ಅರಿಷಿಣ, ಮೆಣಸಿನ ಹುಡಿ, ಕ-ರಿಮೆಣಸು, ದಾಲ್ಚಿನಿ ಮತ್ತು ಕೊತ್ತಂಬರಿ ಹುಡಿಯಂತಹ ಮಸಾಲೆ ತಯಾರಿಕೆಯಲ್ಲಿ ಬಳಕೆಯಾಗುವ ಸಾಂಬಾರ್ ಪದಾರ್ಥಗಳು ಸುಲಭವಾಗಿ ಕಲಬೆರಕೆಗೆ ಗುರಿಯಾಗುತ್ತವೆ. ಮಸಾಲೆ ಉತ್ಪಾದಕರು ಪ್ರಮಾಣವನ್ನು ಹೆಚ್ಚಿಸಲು ಮತ್ತು ಉತ್ಪಾದನಾ ವೆಚ್ಚವನ್ನು ತಗ್ಗಿಸಲು ಸ್ಟಾರ್ಚ್,ಮರದ ಹೊಟ್ಟು, ಕೃತಕ ಬಣ್ಣಗಳು ಮತ್ತು ರಾಸಾಯನಿಕ ಬಣ್ಣಗಳನ್ನು ಬಳಸುತ್ತಾರೆ. ಇದು ಈ ಮಸಾಲೆಗಳ ಗುಣಮಟ್ಟ ಮತ್ತು ಸುರಕ್ಷತೆಯ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತದೆ.

ಕಲಬೆರಕೆ ದೂರುಗಳ ಹಿನ್ನೆಲೆಯಲ್ಲಿ ಎಫ್‌ಎಸ್‌ಎಸ್‌ಎಐ,ಇನ್ನಷ್ಟು ಕಲಬೆರಕೆಯನ್ನು ತಡೆಯಲು ಅನುಮತಿಸಲ್ಪಟ್ಟ ಕೀಟನಾಶಕ ಮಟ್ಟಗಳನ್ನು 10 ಪಟ್ಟು ಹೆಚ್ಚಿಸುವುದಾಗಿ ಇತ್ತೀಚಿಗೆ ಹೇಳಿತ್ತು.

# ವಿದ್ಯಾಚೇತನ ಪ್ರಕಾಶನದಿಂದ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ವಿದ್ಯಾಚೇತನ ಪ್ರಕಾಶದಿಂದ ಕೊಡಮಾಡುವ ರಾಜ್ಯ ಮಟ್ಟದ ಪ್ರಶಸ್ತಿಗೆ ಪುರಸ್ಕಾರಕ್ಕೆ ಬೆಂಗಳೂರಿನ ಡಾ.ಲಲಿತಾ ಹೊರಪ್ಯಾಟಿ ಅವರ “ಬ್ಯೂಟಿ ಬೆಳ್ಳಕ್ಕಿ” ಕಥಾ ಸಂಕಲನ, ವಿಜಯಪುರದ ಜಂಬುನಾಥ ಕಂಚ್ಯಾಣಿಯವರ “ಮತ್ತೆ ಅವತರಿಸಿದ ದೈತರು” ವೈಜ್ಞಾನಿಕ ಕಾದಂಬರಿ, ಬೆಳಗಾವಿ ಜಿಲ್ಲೆಯ ಹುನಶಿಕಟ್ಟೆಯ ಎಂ.ಎಂ.ಸಂಗಣ್ಣವರ ಅವರ “ಅಮ್ಮಬೇಕು” ಕವನ ಸಂಕಲನ ಮತ್ತು ಮಕ್ಕಳ ವಿಭಾಗದಲ್ಲಿ ಗದಗಿನ ಪ್ರಣತಿ ಗಡಾದ ಇವರ “ನಾನು ಮಳೆ ಆದರೆ” ಕವನ ಸಂಕಲನ ಆಯ್ಕೆಯಾಗಿರುತ್ತದೆ.



ಜು.28ರಂದು ಸಿಂದಗಿಯ ಸಾರಂಗಮಠದಲ್ಲಿ ಜರುಗುವ ಸಮಾರಂಭದಲ್ಲಿ ಆಯ್ಕೆಯಾದ ಲೇಖಕರಿಗೆ ನಗದು ಬಹುಮಾನದೊಂದಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಮಕ್ಕಳ ಹಿರಿಯ ಸಾಹಿತಿ ಹ.ಮ.ಪೂಜಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನರ ಜೀವನ ಮಟ್ಟ ಸುಧಾರಿಸುವ ಅಭಿಯಾನಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಚಾಲನೆ

# ಸಂಪೂರ್ಣತಾ ಅಭಿಯಾನ ಯಶಸ್ವಿಗೆ ಶ್ರಮಿಸಲು ಜಿಲ್ಲಾಧಿಕಾರಿ ಕರೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲೊಂದಾದ "ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮ"ದಡಿ "ಸಂಪೂರ್ಣತಾ ಅಭಿಯಾನ ಉತ್ಸವ" ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ತಾಲೂಕಾ ಮಟ್ಟದಲ್ಲಿನ ಜನರ ಜೀವನ ಮಟ್ಟ ಸುಧಾರಿಸಲು ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಕರೆ ನೀಡಿದರು.



ಈ ಯೋಜನೆಯಡಿ ರಾಜ್ಯದಲ್ಲಿ ಒಟ್ಟು 14 ತಾಲ್ಲೂಕುಗಳನ್ನು ಗುರುತಿಸಿದ್ದು, ಇದರಲ್ಲಿ ವಿಜಯಪುರ ಜಿಲ್ಲೆಯ ತಾಳಿಕೋಟಿ ತಾಲ್ಲೂಕನ್ನು ಆಯ್ಕೆ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಶುಕ್ರವಾರದಂದು ತಾಳಿಕೋಟೆ ಪಟ್ಟಣದ ಸಂಗಮೇಶ್ವರ ಸಭಾಭವನದಲ್ಲಿ ನೀತಿ ಆಯೋಗ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ವಿಜಯಪುರ ಮತ್ತು ತಾಲೂಕು ಆಡಳಿತ, ತಾಲೂಕು ಪಂಚಾಯತಿ ತಾಳಿಕೋಟಿ ಇವರ ಸಹಯೋಗದೊಂದಿಗೆ ಆಯೋಜಿಸಿದ್ದ "ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮ"ದಡಿ "ಸಂಪೂರ್ಣತಾ ಅಭಿಯಾನ ಉತ್ಸವ"ಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು.

ಆಯ್ಕೆಯಾದ ತಾಲ್ಲೂಕಿನಲ್ಲಿ ಜನರ ಜೀವನ ಮಟ್ಟವನ್ನು ಸುಧಾರಿಸಲು ಪ್ರಮುಖ ಸೇವಾ ವಲಯಗಳಾದ ಆರೋಗ್ಯ, ಪೌಷ್ಠಿಕತೆ, ಶಿಕ್ಷಣ, ಕುಡಿಯುವ ನೀರು ಮತ್ತು ನೈರ್ಮಲ್ಯ, ಕೃಷಿ, ಜಲ ಸಂಪನ್ಮೂಲಗಳು, ಆರ್ಥಿಕ ಸೇರ್ಪಡೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಿ ಮೇಲಿನ ಎಲ್ಲಾ ವಲಯಗಳಲ್ಲಿ 2 ವರ್ಷಗಳ ಅವಧಿಯಲ್ಲಿ ರಾಜ್ಯ ಮಟ್ಟದ ಸರಾಸರಿ ಅಭಿವೃದ್ಧಿ ಸೂಚ್ಯಾಂಕಗಳಿಗೆ ಸರಿ ಸಮನಾಗಿ ಪ್ರಗತಿಯನ್ನು ಸಾಧಿಸಿ, ಸೂಚ್ಯಾಂಕಗಳ ಸುಸ್ಥಿರತೆಯನ್ನು ಕಾಪಾಡಿಕೊಳ್ಳುವ ಗುರಿಯನ್ನು ಹೊಂದಲಾಗಿದೆ. ಜುಲೈ 4 ರಿಂದ ಸೆಪ್ಟೆಂಬರ್ 30 ವರೆಗೆ ಈ ಅಭಿಯಾನವು ನಡೆಯಲಿದೆ ಎಂದು ಹೇಳಿದರು.

ಭಾರತ ಸರ್ಕಾರದ ನೀತಿ ಆಯೋಗದವರು ಮಹತ್ವಾಕಾಂಕ್ಷಿ ಜಿಲ್ಲೆಗಳ ಕಾರ್ಯಕ್ರಮದ ಯಶಸ್ಸಿನ ಆಧಾರದನ್ವಯ ದೇಶದಲ್ಲಿ 39 ಬಹು ಆಯಾಮದ ಸೂಚ್ಯಾಂಕಗಳಲ್ಲಿ ರಾಜ್ಯ ಮತ್ತು ಕೇಂದ್ರ ಮಟ್ಟದ ಸರಾಸರಿ ಅಭಿವೃದ್ಧಿಗಿಂತ ಕಡಿಮೆ ಇರುವ 500 ತಾಲ್ಲೂಕುಗಳನ್ನು ಮಹತ್ವಾಕಾಂಕ್ಷಿ ತಾಲ್ಲೂಕುಗಳೆಂದು ಆಯ್ಕೆ ಮಾಡಿರುತ್ತಾರೆ. ಮಹತ್ವಾಕಾಂಕ್ಷೆಯ ತಾಲೂಕಿನಲ್ಲಿ ಆರು ಪ್ರಮುಖ ಕಾರ್ಯಕ್ಷಮತೆ ಸೂಚಕಗಳಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸುವ ಗುರಿಯನ್ನು ಹೊಂದಿದೆ. ಇದು ಮುಂದಿನ 90 ದಿನಗಳಲ್ಲಿ ವ್ಯಾಪಕ ಪ್ರಚಾರ ನೀಡಿ ನಿಗದಿತ ಗುರಿ ಸಾಧಿಸಲು ನಾವೆಲ್ಲರೂ ಶ್ರಮಿಸೋಣ ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ನೀತಿ ಆಯೋಗದಡಿ ಜಿಲ್ಲೆಯ ತಾಳಿಕೋಟೆ ತಾಲೂಕನ್ನು ಮಹತ್ವಾಕಾಂಕ್ಷಿ ತಾಲೂಕು ಎಂದು ಆಯ್ಕೆಮಾಡಲಾಗಿದೆ. ಸದ್ಯ ಆಯ್ಕೆ ಮಾಡಲಾದ ಜನರ ಜೀವನ ಮಟ್ಟವನ್ನು ಸುಧಾರಿಸಲು ಪ್ರಮುಖ ಸೇವಾ ವಲಯಗಳಾದ ಆರೋಗ್ಯ, ಶಿಕ್ಷಣ, ಮೂಲಸೌಲಭ್ಯ, ಸಾಮಾಜಿಕ ಅಭಿವೃದ್ಧಿ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸುಧಾರಣೆ ತರುವ ಮೂಲಕ ಜನರ ಜೀವನಮಟ್ಟ ಎತ್ತರಿಸುವ ಉದ್ದೇಶ ಈ ಕಾರ್ಯಕ್ರಮದ್ದಾಗಿದೆ. ತಾಲೂಕಿನಲ್ಲಿ 6 ಪ್ರಮುಖ ಸೂಚಕಗಳ ಸಂಪೂರ್ಣತೆಯನ್ನು ಸಾಧಿಸಲು ಸುಸ್ಥಿರ ಪ್ರಯತ್ನ ಕೈಗೊಳ್ಳಲು ನೀತಿ ಆಯೋಗವು, ಇಂದಿನಿಂದ 3 ತಿಂಗಳ ಕಾಲ ಸಂಪೂರ್ಣತಾ ಅಭಿಯಾನ ಹಮ್ಮಿಕೊಂಡಿದೆ ಎಂದು ಹೇಳಿದರು.



ಪ್ರಸವಪೂರ್ವ ಆರೈಕೆ ನೋಂದಣಿ, ಮಧುಮೇಹ ತಪಾಸಣೆ, ಅಧಿಕ ರಕ್ತದೊತ್ತಡ ಸ್ಕ್ರೀನಿಂಗ್ , ಪೂರಕ ಪೋಷಣೆ, ಮಣ್ಣಿನ ಆರೋಗ್ಯ ಪರೀಕ್ಷೆ ಹಾಗೂ ಸ್ವಸಹಾಯ ಗುಂಪುಗಳಿಗೆ ಆವರ್ತ ನಿಧಿ ನೀಡುವ ಮೂಲಕ ಶೇ.100 ರಷ್ಟು ಪ್ರಗತಿ ಸಾಧಿಸಲು ಅಧಿಕಾರಿಗಳು ಶ್ರಮಿಸಬೇಕು ಮತ್ತು ತಾಲೂಕಿನಲ್ಲಿ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಸಂಪೂರ್ಣತಾ ಅಭಿಯಾನದಲ್ಲಿನ ಎಲ್ಲಾ ಸೂಚ್ಯಾಂಕಗಳಲ್ಲಿ ಪೂರ್ಣ ಪ್ರಗತಿಯನ್ನು ಸಾಧಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ 10 ಜನ ಗರ್ಭಿಣಿ ಮಹಿಳೆಯರಿಗೆ ತಾಯಿ ಕಾರ್ಡ್ , 5 ಜನ ಮೇಲ್ವಿಚಾರಕ–ರಿಗೆ ಪೋಷಣ್ □□□□□□□ಕರ್ ಮೊಬೈಲ್, 5 ಫಲಾನುಭವಿಗಳಿಗೆ ಸುಕನ್ಯಾ ಸಮೃದ್ಧಿ ಯೋಜನೆಯ ಪಾಸ್ ಬುಕ್ ಹಾಗೂ 20 ಜನ ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡಲಾಯಿತು. ಇದೇ ವೇಳೆ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮವನ್ನೂ ಸಹ ನೆರವೇ–ರಿಸಲಾಯಿತು.

ಕಾರ್ಯಕ್ರಮದಲ್ಲಿ ಗಮನ ಸೆಳೆದ ವಸ್ತು ಪ್ರದರ್ಶನ ಮಳಿಗೆಗಳು : ಜಲ ಜೀವನ ಮಿಷನ್, ತೋಟಗಾರಿಕೆ ಇಲಾಖೆ, ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಸ್ವ ಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ಉತ್ಪನ್ನಗಳು ಹಾಗೂ ಮಹಾತ್ಮಗಾಂಧಿ ನರೇಗಾ ಯೋಜನೆಯ ಮಾಹಿತಿಯುಳ್ಳ ಮಾಹಿತಿ ಕೇಂದ್ರ ಹೀಗೆ ವಿವಿಧ ಇಲಾಖೆಗಳ ಸಹಕಾರದಲ್ಲಿ ಏರ್ಪಡಿಸಲಾಗಿದ್ದ ವಸ್ತು ಪ್ರದರ್ಶನ ಮಳಿಗೆಗಳು ಎಲ್ಲರ ಗಮನ ಸೆಳೆದವು.

ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿ ಎ. ಬಿ. ಅಲ್ಲಾಪೂರ ಅವರು ಸಂಪೂರ್ಣತಾ ಅಭಿಯಾನದ ಪ್ರತಿಜ್ಞಾ ವಿಧಿ ಬೋಧಿಸಿದರು.

ತಾಳಿಕೋಟಿ ಪಟ್ಟಣದ ಬಸವೇಶ್ವರ ಸರ್ಕಲ್ ನಿಂದ ಸಂಗಮೇಶ್ವರ ಕಲ್ಯಾಣ ಮಂಟಪದವರೆಗೆ ಸಂಪೂರ್ಣತಾ ಅಭಿಯಾನ ಜಾಗೃತಿ ಜಾಥಾ ಅತೀ ವಿಜೃಂಭಣೆಯಿಂದ ಜರುಗಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಜಿ.ಪಂ. ಯೋಜನಾ ನಿರ್ದೇಶಕರಾದ ಸಿ. ಬಿ. ದೇವರಮನಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾ–ರಿಗಳಾದ ಸಿ. ಬಿ ಕುಂಬಾರ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿಗಳಾದ ಎ. ಬಿ. ಅಲ್ಲಾಪೂರ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಬಿ. ಆರ್. ಬಿರಾದಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಎನ್. ಎಚ್. ನಾಗೂರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೆ.ಕೆ ಚವ್ಹಾಣ, ಕೃಷಿ ಇಲಾಖೆಯ ಜಂಟಿನಿರ್ದೇಶಕರಾದ ರಾಜಶೇಖರ ವಿಲಿಯಮ್ಸ್, ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಗಳಾದ ಅನ್ನಪ್ಪಸ್ವಾಮಿ, ಪಶು ಸಂಗೋಪನೆ ಇಲಾಖೆಯ ಉಪನಿರ್ದೇಶಕರಾದ ಡಾ. ಘೊಣಸಗಿ, ತಹಶೀಲ್ದಾರರಾದ ಪ್ರೇಮಸಿಂಗ ಪವಾರ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಉಮೇಶ ಲಮಾಣಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಾವಳಗಿ, ಶಿಶು ಅಭಿವೃದ್ಧಿ ಯೋಜನಾಧಿಕಾ–ರಿಗಳಾದ ಕುಂಬಾರ, ತಾಲೂಕು ಆರೋಗ್ಯ ಅಧಿಕಾರಿಗಳಾದ ಸತೀಶ ತಿವಾರಿ, ತಮದಡ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಮಡಿವಾಳರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಹಿರೇಗೌಡರ, ಹಿರೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಿ. ಎಸ್. ಮಠ, ಕೊಡಗಾನೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅನಿಲಕುಮಾರ ಕೀರಣಗಿ, ಜಿಲ್ಲಾ, ತಾಲೂಕು, ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳು, ಸಿಬ್ಬಂದಿಯವರು, ಸರ್ವ ಸದಸ್ಯರು, ಗರ್ಭಿಣಿಯರು, ಆಶಾಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪ್ರಗತಿಪರ ರೈತರು ಹಾಗೂ ಇತರರು ಉಪಸ್ಥಿತರಿದ್ದರು.

## ನೀತಿ ಆಯೋಗದ ಅಧಿಕಾರಿಗಳಿಂದ ಪರಿಶೀಲನೆ

ತಾಳಿಕೋಟಿ ತಾಲೂಕಿಗೆ ಇಂದು ಮಹತ್ವಾಕಾಂಕ್ಷಿ ತಾಲ್ಲೂಕು ಕಾರ್ಯಮದಡಿ ಸಂಪೂರ್ಣತಾ ಅಭಿಯಾನದ ಉತ್ಸವ ಕಾರ್ಯಕ್ರಮದ ನಿಮಿತ್ಯ ಜಿಲ್ಲೆಗೆ ಆಗಮಿಸಿರುವ ನೀತಿ ಆಯೋಗದ ಅಧಿಕಾರಿಗಳು "ಸಂಪೂರ್ಣತಾ ಅಭಿಯಾನ ಉತ್ಸವ"ದ ಕಾರ್ಯಕ್ರಮದಡಿ ಇರುವ ಸೂಚ್ಯಾಂಕಗಳಿಗೆ ಸಂಬಂಧಿಸಿದಂತೆ ಹಿರೂರ ಗ್ರಾಮ ಪಂಚಾಯತಿ, ತಾಳಿಕೋಟೆ ಪಟ್ಟಣದ ಪಶು ಆಸ್ಪತ್ರೆ ಆಸ್ಪತ್ರೆ, ತಮದಡ್ಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಬಳಿಕ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು, ಕೊಡಗಾನೂರ ಗ್ರಾಮ ಪಂಚಾಯತಿಯಲ್ಲಿ ಬಿ.ಎಸ್.ಎನ್.ಎಲ್ ಸಂಪರ್ಕ ವ್ಯವಸ್ಥೆ ಹಾಗೂ ತಮದಡ್ಡಿ ಗ್ರಾಮದ ಜಲ ಜೀವನ ಮಿಷನ್ ಯೋಜನೆಯಡಿ ನಿರ್ಮಿಸಿದ ಕಾಮಗಾರಿಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

## ಜು.7ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ವಿಜಯಪುರ: 110 ಕೆವಿ ದೇವರ ಹಿಪ್ಪರಗಿ – ಸಿಂದಗಿ ವಿದ್ಯುತ್ ಪ್ರಸರಣ ಮಾರ್ಗದಲ್ಲಿ ವಾಹಕ ಮತ್ತು ಗೋಪುರಗಳ ಬದಲಾವಣೆ ಕಾಮಗಾರಿ ಕೈಗೊಂಡಿದ್ದು, ಈ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ 33 ಕೆವಿ ಕಲಕೇರಿ ಫೀಡರ್, 33 ಕೆವಿ ಗೋಲಗೇರಿ ಫೀಡರ್, 11 ಕೆವಿ ಬಂದಳ ಐಪಿ, 11 ಕೆವಿ ಬ್ಯಾಕೊಡ ಫೀಡರ್ ಮಾರ್ಗಗಳಲ್ಲಿ ಜುಲೈ 7 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಸಹಕ–ರಿಸಬೇಕು ಎಂದು ಇಂಡಿ ಹೆಸ್ಕಾಂ ಕಾರ್ಯ ನಿರ್ವಾಹ

## ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸ: ಅವಧಿ ವಿಸ್ತರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಾರ್ಷಿಕ–ಪೂರಕ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಂದ 2024–25ನೇ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸಗಳಾದ ಅಟೊಮೊಬೈಲ್, ಸಿವಿಲ್, ಮೆಕ್ಯಾನಿಕಲ್, ಇಂಜಿನಿಯ–ರಿಂಗ್ ವಿಭಾಗಗಳಲ್ಲಿ ಖಾಲಿ ಉಳಿದಿರುವ ಸೀಟುಗಳ ಪ್ರವೇಶಕ್ಕಾಗಿ ಜುಲೈ 01ರವರೆಗಿದ್ದ ಕೊನೆಯ ದಿನಾಂಕವನ್ನು ಜುಲೈ 15ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಪ್ರವೇಶ ವಿಭಾಗದ ವಿಭಾಗದ ಕಾರ್ಯನಿರ್ವಾಹಕರನ್ನು ಸಂಪರ್ಕಿಸುವಂತೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೈಹಿಕ ಶಿಕ್ಷಣ ಶಿಕ್ಷಕರ ಸಂಘಕ್ಕೆ ನೇಮಕ

**ಉದಯರಶ್ಮಿ ನ್ಯೂಸ್**

ನಿಡಗುಂದಿ: ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ನಿಡಗುಂದಿ ತಾಲ್ಲೂಕು ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಗುರುವಾರ ಜರುಗಿತು.

ಅಧ್ಯಕ್ಷರಾಗಿ ಎಸ್.ಎಸ್. ಗಲಗಲಿ, ಕಾರ್ಯದರ್ಶಿಯಾಗಿ ಬಿ.ಎಂ. ಬಳಬಟ್ಟಿ, ಖಜಾಂಚಿಂ–ಯಾಗಿ ವಿ.ಎಸ್. ಕುಲಕರ್ಣಿ ನೇಮಕಗೊಂಡಿದ್ದಾರೆ.

ಸದಸ್ಯರ ಹೆಸರುಗಳು: ಜಿ.ಎಂ.ಹಿರೇಮಠ, ಎಸ್. ಎಚ್.ನಾಗಣಿ, ಆರ್.ಎಸ್. ವಡ್ಡರ, ಎಂ.ಜಿ.ದಾನಪ್ಪನವರ, ಆರ್.ಕೆ.ಪವಾರ, ಎಚ್. ಎಚ್.ಬೀಳಗಿ, ಬಿ.ಎಸ್. ಇಬ್ರಾಹಿಂಪುರ, ಎ.ಬಿ.ಚಲವಾಗಿ ಎಲ್.ಜಿ.ಚಲವಾಗಿ, ಎಂ.ಬಿ.ನಿಗರಿ, ಎನ್.ಡಿ.ತೋಳಮಟ್ಟಿ, ಎಸ್.ವಾಯ್. ಗೊಳಸಂಗಿ ಇತರರು.



ಎಸ್.ಎಸ್.ಗಲಗಲಿ ಬಿ.ಎಂ.ಬಳಬಟ್ಟಿ

## ಕುಸುಬೆ ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್ 5800 ರೂ. ಬೆಂಬಲ ಬೆಲೆ ನಿಗದಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನಕ್ಕೆ ಪ್ರತಿ ಕ್ವಿಂಟಲ್ 5800 ರೂ. ಬೆಂಬಲ ಬೆಲೆ ನಿಗದಿಪಡಿಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಕನಿಷ್ಠ ಬೆಂಬಲ ಬೆಲೆ ಜಿಲ್ಲಾ ಕಾರ್ಯಪಡೆ ಸಮಿತಿ ನಿರ್ಧ–ರಿಸಿದೆ ಎಂದು ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಹಿಂಗಾರು ಹಂಗಾಮಿನಲ್ಲಿ 948 ಹೆಕ್ಟೇರ್ ಕ್ಷೇತ್ರದಲ್ಲಿ ಕುಸುಬೆ ಬಿತ್ತನೆಯಾಗಿದ್ದು, ಅಂದಾಜು 9480 ಕ್ವಿಂಟಲ್ ಇಳುವರಿ ಅಂದಾಜಿಸಲಾಗಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ 4700 ರಿಂದ 4750 ರೂ. ವರೆಗಿನ ದರದಿಂದ ಮಾರಾಟವಾಗುತ್ತಿದ್ದು, ಕೇಂದ್ರ ಸರ್ಕಾರದ ಬೆಂಬಲ ಬೆಲೆಯಡಿ ಪ್ರತಿ ಕ್ವಿಂಟಾಲ್ ಕುಸುಬೆ ಉತ್ಪನ್ನಕ್ಕೆ 5800 ರೂ. ಬೆಲೆ ನಿಗದಿಪಡಿಸಿ ಖರೀದಿಸಲು ನಿರ್ಧರಿಸಲಾಗಿದೆ.

ಬೆಂಬಲ ಬೆಲೆಯಡಿ ಕುಸುಬೆ ಉತ್ಪನ್ನ ಖರೀದಿಗೆ ಜಿಲ್ಲೆಯ ಕೆಓಎಫ್ ಸಂಸ್ಥೆಯ ಎಣ್ಣೆ ಬೀಜ ಬೆಳಗಾರರ ಸಹಕಾರಿ ಸಂಘಗಳನ್ನು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನಾಗಿ ಪರಿಗಣಿಸಲಾಗಿದ್ದು, ರೈತರ ನೊಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸಭೆಯಲ್ಲಿ ನಿರ್ಧ–ರಿಸಲಾಗಿದೆ.

ಜಿಲ್ಲೆಯಲ್ಲಿ ವಿಜಯಪುರ–ಬಬಲೇಶ್ವರ ತಾಲೂಕಿನ ಬಬಲೇಶ್ವರ ಹಾಗೂ ಸವನಹಳ್ಳಿ ಎಣ್ಣೆ ಬೀಜ ಬೆಳೆಗಾರರ ಸಹಕಾರಿ ಸಂಘ, ಮುದ್ದೇಬಿಹಾಳ ತಾಲೂಕಿನ ತಂಗಡಗಿ, ಇಂಡಿ–ಚಡಚಣ ತಾಲೂಕಿನ ಚಡಚಣ, ಹಲಸಂಗಿ, ಎಣ್ಣೆ ಬೀಜ ಬೆಳೆಗಾರರ ಸಹಕಾರಿ ಸಂಘ, ಸಿಂದಗಿ ತಾಲೂಕಿನ ಸಿಂದಗಿ, ಟಿಎಪಿಸಿಎಂಎಸ್, ಹಾಗೂ ಬಸವನಬಾಗೇವಾಡಿ ತಾಲೂಕಿನಲ್ಲಿ ಟಿಎಪಿಸಿಎಂ ಬಸವನಬಾಗೇವಾಡಿಯಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದೆ.

ಪ್ರತಿ ರೈತರಿಂದ ಪ್ರತಿ ಎಕರೆಗೆ ಗರಿಷ್ಠ 5 ಕ್ವಿಂಟಾಲ್‌ನಂತೆ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆಯನ್ನು ಖರೀದಿಸಬೇಕು. ಖರೀದಿ ಸಂಸ್ಥೆಗಳು ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ಮಾರ್ಗಸೂಚಿಯನ್ವಯ ಕುಸುಬೆ ಉತ್ಪನ್ನ ಖರೀದಿಸಬೇಕು. ರೈತರ ನೊಂದಣಿ ಕಾರ್ಯಕ್ಕೆ ಸಿಬ್ಬಂದಿ ಕೊರತೆಯಾದಲ್ಲಿ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಸಿಬ್ಬಂದಿಗಳನ್ನು ಬಳಸಿಕೊಂಡು ಆ ಸಿಬ್ಬಂದಿಗೆ ಸೂಕ್ತ ಗ್ರೇಡಿಂಗ್ ತರಬೇತಿ ನೀಡುವಂತೆ ಸಂಬಂಧಿಸಿದ ಖರೀದಿ ಸಂಸ್ಥೆಗಳಿಗೆ ಕ್ರಮ ವಹಿಸಬೇಕು. ಕುಸುಬೆ ಖರೀದಿ ಕೇಂದ್ರಗಳಲ್ಲಿ ವರ್ತಕರು ತರುವ ಕುಸುಬೆ ಖರೀದಿಸಬಾರದು ಖರೀದಿ ಸಂಸ್ಥೆಗಳ ದುರುಪಯೋಗವಾಗದಂತೆ ಮುನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಕುಸುಬೆ ಖರೀದಿ –ಕೇಂದ್ರಗಳ ಕು–ರಿತು ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರು, ಕೆಓ–ಎಫ್. ವಿಜಯಪುರ ಇವರ ಮೊ:9900553054 ಸಂಖ್ಯೆಗೆ ಸಂಪರ್ಕಿಸುವಂತೆ ತಿಳಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.7ರಂದು ವಿಜಯಪುರದಲ್ಲಿ ವಿಚಾರ ಸಂಕಿರಣ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಗರದ ಪಿ.ಡಿ.ಜೆ.ಕಾಲೇಜಿನ ಸಭಾಭವನದಲ್ಲಿ, ಜು.7 ರವಿವಾರ ಬೆಳಿಗ್ಗೆ 10–00 ಗಂಟೆಗೆ –

'ಸ್ವಾತಂತ್ರ್ಯವೀರ ಸಾವರ್ಕರ್ ಮೇಲಿನ ಆರೋಪಗಳು ಸತ್ಯವೋ. ಮಿಥ್ಯವೋ.?' ವಿಷಯದ ಮೇಲೆ ವಿಚಾರ ಸಂಕಿರಣ ಮತ್ತು ಸಾವರ್ಕರ್ ಸಮಗ್ರ ಸಂಪುಟ –1 ಮತ್ತು ಸಂಪುಟ–6 ಹಾಗೂ ನೇತಾಜಿ ಸುಭಾಷ್ ಚಂದ್ರ ಬೋಸ್ ಜೀವನ ಚರಿತ್ರೆಯಾಧರಿತ ಕಾದಂಬರಿ 'ಮಹಾಕಾಲ' ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ಸಾನಿಧ್ಯವನ್ನು , ಜ್ಞಾನಯೋಗಾಶ್ರಮದ ಬಸವಲಿಂಗ ಸ್ವಾಮೀಜಿ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಸಾಹಿತಿಗಳು, ಇತಿಹಾಸಕಾರರಾದ ಡಾ.ಜಿ.ಬಿ.ಹರೀಶ , ಮುಖ್ಯ ಅತಿಥಿಗಳಾಗಿ ಪುಸ್ತಕ ಪ್ರಕಾಶಕರಾದ ಹರ್ಷ ಸಮೃದ್ಧ ಆಗಮಿಸುತ್ತಿದ್ದಾರೆ. ವೇದಿಕೆ ಮೇಲೆ 2 ಮಹಾಸಭೆಗಳ ಅಧ್ಯಕ್ಷರು, 7 ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು, 4 ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರು, ವಕೀಲರ ಸಂಘದ ಅಧ್ಯಕ್ಷರು ಮತ್ತು ಇನ್ನಿತರರ ಗೌರವ ಉಪಸ್ಥಿತಿ ಇರಲಿದೆ ಎಂದು ಕಾರ್ಯಕ್ರಮವನ್ನು ಆಯೋಜಿಸಿರುವ ಮಂಥನ ಮತ್ತು ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಪದಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 9341092167 , 9663872037 ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಲಾಗಿದೆ.

**ಉದಯರಶ್ಮಿ ದಿನಪತ್ರಿಕೆ**

# ಭಾರತೀಯ ದಂಡ ಸಂಹಿತೆ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಯ ಕಾನೂನು

### ವೀಣಾಂತರಂಗ



–ವೀಣಾ ಎಚ್. ಪಾಟೀಲ್, ಮುಂಡರಗಿ

ಬಹುಶಃ ಇತ್ತೀಚೆಗೆ ಜಗತ್ತಿನಾದ್ಯಂತ ಅತ್ಯಂತ ದುರ್ಬಳಕೆಯಾಗುತ್ತಿರುವ ವೇದಿಕೆ ಎಂದರೆ ಅದು ಸಾಮಾಜಿಕ ಜಾಲತಾಣಗಳು. ವಿವಿಧ ಸಾಮಾಜಿ–ಕ ತಾಣಗಳಲ್ಲಿ ಕೆಲವರ ಸ್ಟೇಟಸ್ ಗಳನ್ನು, ಸ್ಟೋರಿಗಳನ್ನು ನೋಡಿದರೆ ಸಾಕು ಅವರ ಮನಸ್ಥಿತಿಯ ಅರಿವಾಗುತ್ತದೆ.. ಎಷ್ಟೋ ಬಾರಿ ಜನರು ತಮ್ಮ ಮನಸ್ಸಿನ ಕಹಿಯನ್ನು, ದ್ವೇಷ ಅಸೂಯೆಗಳನ್ನು ಹೊರಹಾಕಲು ಸ್ಟೇಟಸ್ಗಳ ಬಳಸುತ್ತಾರೆ. ರಾಜಕೀಯ ಪಕ್ಷಗಳ ನಾಯಕರು ಆಡಿದ ಪರ ವಿರೋಧಿ ಮಾತುಗಳ ಮೇಲೆ ದೇಶದ ಪ್ರತಿ ಹಳ್ಳಿ, ಪಟ್ಟಣ, ಶಹರಗಳ ಗಲ್ಲಿ ಗಲ್ಲಿಗಳಲ್ಲಿ ಅಸಹನೆಯ ದ್ವೇಷದ ಹೊಗೆ ಕಾರುವ ಸಂದೇಶಗಳು, ವಿಡಿಯೋಗಳು ಹರಿದಾಡುತ್ತವೆ. ಕೆಲವೊಮ್ಮೆ ತಮಗೆ ಬೇಕಾದಂತೆ ವಿಡಿಯೋಗಳನ್ನು, ಸಂದೇಶಗಳನ್ನು ವಿಕೃತವಾಗಿ ತಿರುಚಲಾಗುತ್ತದೆ.



ಹಲವು ಬಾರಿ ಹೆಣ್ಣು ಮಕ್ಕಳ ಫೋಟೋಗಳನ್ನು ಇಂದು ಲಭ್ಯವಿರುವ ಹಲವಾರು ಆಪ್ ಗಳ ಸಹಾಯದಿಂದ ಮಾರ್ಪಡಿಸಿ ವಿಕೃತ ಕಾರ್ಯಗಳಿಗೆ ದುರ್ಬಳಕೆ ಮಾಡಿಕೊಳ್ಳಲಾಗುತ್ತದೆ. ಮತ್ತೆ ಕೆಲವೊಮ್ಮೆ ಕೆಲವರು ಮಾತನಾಡಿದ ಮಾತುಗಳನ್ನು ರೆಕಾರ್ಡ್ ಮಾಡಿ ಅವುಗಳನ್ನು ಬೇರೆಯವ–ರಿಗೆ ತೋರಿಸಿ ಅವಹೇಳನ ಮಾಡಲಾಗುತ್ತದೆ. ಎಷ್ಟೋ ಬಾರಿ ಸುಳ್ಳು ಸುದ್ದಿಗಳು ಸತ್ಯದ ಮುಖವಾಡ ಹೊದ್ದ ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟವಾಗುತ್ತವೆ. ಇದು ಕೆಲವೊಂದು ದುರಂತಗಳಿಗೂ ಕಾರಣವಾಗುತ್ತದೆ.



ಮೇಲ್ಕಂಡ ಎಲ್ಲ ವಿಷಯಗಳನ್ನು ಮನಗಂಡ ಭಾರತ ಸರ್ಕಾರವು ಇತ್ತೀಚೆಗೆ ಭಾರತೀಯ ನ್ಯಾಯದಂಡ ಸಂಹಿತೆಯಲ್ಲಿ ಕೆಲ ಅಂಶಗಳನ್ನು ಗುರುತಿಸಿ ವಿಧಿಪೂರ್ವಕವಾಗಿ ಅವುಗಳನ್ನು ಜಾರಿಗೆ ತಂದಿದೆ.

ದೇಶದಲ್ಲಿ ಜುಲೈ 1, 2024ಕ್ಕೆ ಅನ್ವಯವಾಗುವಂತೆ ಜಾರಿಗೆ ಬಂದ ಭಾರತೀಯ ನ್ಯಾಯ ಸಂಹಿತೆ ( ಬಿ ಎನ್ ಎಸ್ ) ಯ ಪ್ರಕಾರ ಸಾಮಾಜಿಕ ಜಾಲತಾಣಗಳನ್ನು ಬಳಸುವ ಪ್ರತಿ ಭಾರತೀಯ ಪ್ರಜೆಯೂ ಕೆಲ ಕಾನೂನು ಪರಿಣಾಮಗಳನ್ನು ಎದು–ರಿಸದೆ ಇರಲು ಈ ಕೆಳಕಂಡ ವಿಷಯಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

* ಭಾರತೀಯ ದಂಡ ಸಂಹಿತೆ (ಐಪಿಸಿ ಸೆಕ್ಷನ್) 153 ಎ ನ ಪ್ರಕಾರ ಹಿಂಸೆ, ದ್ವೇಷ ಮತ್ತು ಶತ್ರುತ್ವವನ್ನು ಹೆಚ್ಚಿಸುವ ವಿಷಯಗಳನ್ನು, ಭಾಷಣಗಳನ್ನು, ವಿಡಿಯೋ ಕ್ಲಿಪ್ ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಬಾರದು.

*ಭಾರತೀಯ ದಂಡ ಸಂಹಿತೆಯ 354 ಎ ಸೆಕ್ಷನ್ ಮೂಲಕ ವೈಯುಕ್ತಿಕ ಮತ್ತು ಅತಿ ಸೂಕ್ಷ್ಮ ಮಾಹಿತಿಗಳನ್ನು ಹಂಚಿಕೊಳ್ಳುವುದನ್ನು ತಡೆಹಿಡಿಯಬಹುದು.

*ಭಾರತೀಯ ದಂಡ ಸಂಹಿತೆ 354 ಡಿ ಯ ಪ್ರಕಾರ ಅಂತರ್ಜಾಲದ ಮೂಲಕ ವ್ಯಕ್ತಿಯ ಮಾನಹರಣ ಮತ್ತು ಸೈಬರ್ ಬೆದರಿಕೆಯಂತಹ ಹಿಂಸಾತ್ಮಕ ಚಟುವಟಿಕೆಗಳು ಶಿಕ್ಷಾರ್ಹ ಅಪರಾಧಗಳಾಗಿವೆ.

*ಸೆಕ್ಷನ್ 505 ರ ಪ್ರಕಾರ ಯಾವುದೇ ತಪ್ಪು ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಅವುಗಳ ನಿಖರತೆಯ ಕುರಿತ ಅರಿವನ್ನು ಹೊಂದಿರಬೇಕು.

* ಭಾರತೀಯ ದಂಡ ಸಂಹಿತೆಯ ಸೆಕ್ಷನ್ 124 ಎ ಪ್ರಕಾರ ರಾಜಕೀಯ ವಿಷಯಗಳ ಕುರಿತ ಮಾಹಿತಿಗಳನ್ನು ಹಂಚಿಕೊಳ್ಳುವಾಗ ಎಚ್ಚರಿಕೆಯಿಂದ ಇರಿ. ಇದು ದೇಶದ್ರೋಹದ ಆರೋಪಕ್ಕೆ ಕಾರಣವಾಗುತ್ತದೆ.





* ಸೆಕ್ಷನ್ 63ರ ಪ್ರಕಾರ ಬೇರೆಯವರ ಬೌದ್ಧಿಕ ಆಸ್ತಿ ಹಕ್ಕುಗಳನ್ನು ಗೌರವಿಸಿ. ಸಂಬಂಧಪಟ್ಟವರ ಅನುಮತಿ ಇಲ್ಲದೆ ಬೇರೊಬ್ಬರ ಕೃತಿಗಳನ್ನು, ಬುದ್ಧಿಮತ್ತೆಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಶೇರ್ ಮಾಡಬೇಡಿ ಮತ್ತು ಬಳಸಿಕೊಳ್ಳಬೇಡಿ. ಕೃತಿ ಚೌರ್ಯ ಅಪರಾಧಾರ್ಹ ಶಿಕ್ಷೆ.

* ಸೆಕ್ಷನ್ 292 ರ ಪ್ರಕಾರ ಅಶ್ಲೀಲ ದೃಶ್ಯಗಳು, ವಿಡಿಯೋಗಳನ್ನು ಹಂಚಿಕೊಳ್ಳುವುದು ಅಪರಾಧವೆಂದು ಪರಿಗಣಿಸಲಾಗುವುದು.

* ಐಪಿಸಿ ಸೆಕ್ಷನ್ 420ರ ಪ್ರಕಾರ ಮೋಸ ಮತ್ತು ವಂಚನೆಯ ಕಾರಣಗಳಿಗಾಗಿ ಸಾಮಾಜಿಕ ಜಾಲತಾಣವನ್ನು ಬಳಸಬಾರದು.

* ಸಂಬಂಧಪಟ್ಟ ಅಧಿಕಾ–ರಿಗಳಿಗೆ ಹಾನಿಕಾರಕ ಮತ್ತು ಆಕ್ಷೇಪಾರ್ಹ ವಿಷಯಗಳನ್ನು ವರದಿ ಒಪ್ಪಿಸಿ.

* ನಿಮ್ಮನ್ನು ನೀವು ನಿರ್ದಿಷ್ಟ ಸಮುದಾಯದೊಂದಿಗೆ ಗುರುತಿಸಿಕೊಳ್ಳಿ. ಆ ಸಮುದಾಯಕ್ಕೆ ಇರುವ ಅರಿವನ್ನು ಹೊಂದಿರಿ. ಇಂದಿನ ಸಾಮಾಜಿಕ ಜಾಲತಾಣ ಮತ್ತು ಅಂತರ್ಜಾಲಗಳಲ್ಲಿರುವ ಕ್ಲಿಷ್ಟಕರ ಅಂಶಗಳನ್ನು ಅರಿತುಕೊಂಡು ಭಾರತವೆಂಬ ಬೃಹತ್ ಪ್ರಜಾಪ್ರಭುತ್ವ ರಾಷ್ಟ್ರದ ಶಾಂತಿ, ಸೌಹಾರ್ದತೆ ಮತ್ತು ಸಾಮರಸ್ಯಗಳನ್ನು ಕಾಪಾಡುವಲ್ಲಿ ನಾವೆಲ್ಲರೂ ಕಟಿಬದ್ಧರಾಗಿ ಕಾರ್ಯನಿರ್ವಹಿಸುವ ಮೂಲಕ ಜವಾಬ್ದಾರಿಯುತ ನಾಗ–ರಿಕರಾಗೋಣ.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದಲ್ಲಿ ಪತ್ರಿಕಾ ದಿನಾಚರಣೆ । ಪತ್ರಕರ್ತರಿಗೆ ಸನ್ಮಾನ

# ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ರಂಗದ ಪಾತ್ರ ಅಪಾರ :ಡಾ.ಪಾಟೀಲ

ಉದಯರಶ್ಮಿ ನ್ಯೂಸ್



ಸಿಂದಗಿ: ಇಡೀ ಜಗತ್ತಿನಲ್ಲಿ ಪತ್ರಿಕಾ ರಂಗ ವಿಶಿಷ್ಟಪೂರ್ಣ ಸ್ಥಾನವನ್ನು ಪಡೆದುಕೊಂಡಿದೆ. ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ರಂಗದ ಪಾತ್ರ ಅಪಾರವಾಗಿದೆ ಎಂದು ಪ್ರಾಚಾರ್ಯ ಡಾ.ಬಿ.ಜಿ.ಪಾಟೀಲ ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವ–ರಿಯ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಂಡ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ತಾಲೂಕಿನ ಪತ್ರಕರ್ತರಿಗೆ ಸನ್ಮಾನಿಸಿ ಗೌರವಿಸಿ ಮಾತನಾಡಿದ ಅವರು, ಪತ್ರಿಕೆಗಳು ಪತ್ರಿಕಾ ಧರ್ಮ ಪಾಲಿಸುವುದರ ಜೊತೆಗೆ ನ್ಯಾಯ, ನಿಷ್ಠುರವಾಗಿ ಸಮಾಜದಲ್ಲಿನ ಸತ್ಯಾಂಶದ ವರದಿಗಳನ್ನು ಪ್ರಕಟಣೆ ಮಾಡುತ್ತಾ ನೊಂದವರ ಧ್ವನಿಯಾಗಿ ಹೊರಹೊಮ್ಮಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿದ ಹಿರಿಯ ಪರ್ತಕರ್ತರಾದ ಟಿ.ಕೆ.ಮಲಗೊಂಡ, ಬೆನಕರಾಜ ಜೋಗುರ, ರಮೇಶ ಪೂಜಾರ, ನಾಗೇಶ ತಳವಾರ ಮಾತನಾಡಿ, ಪರ್ತಕರ್ತರು ಯಾವುದೇ ಬೆದ–ರಿಕೆಗಳಿಗೆ ಹೆದರದೆ ನಿಷ್ಠುರವಾಗಿ ಸುದ್ದಿಗಳನ್ನು ಮಾಡಬೇಕು. ಯಾ–ರಿಗೂ ಮರ್ಜಿ ಕಾಯಬಾರದು. ಇಂದಿನ ಜನಾಂಗಕ್ಕೆ ಓಂ ಶಾಂತಿ ತಾಣ ಅಧ್ಯಾತ್ಮದ ಒಲವನ್ನು ಮೂಡಿಸಿ ಅವರನ್ನು ಸುಸಂಸ್ಕೃತವಂತರನ್ನಾಗಿ ಮಾಡುತ್ತಿರುವ ಕಾರ್ಯ ಶ್ಲಾಘನೀಯ. ಇಂತಹ ಸಂದರ್ಭದಲ್ಲಿ ನಮ್ಮನ್ನು ಗುರುತಿಸಿ ಸನ್ಮಾನಿಸುತ್ತಿರುವ ಕಾರ್ಯವು ಸಂತಸ ತಂದಿದೆ. ಇದು ನಮಗೆ ಅವಿಸ್ಮರಣಿಯ ಕ್ಷಣವಾಗಿದೆ ಎಂದರು.

ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಆನಂದ ಶಾಬಾದಿ ಮಾತನಾಡಿ, ನಮ್ಮ ದಿನನಿತ್ಯದ ಬದುಕನ್ನು ಇನ್ನೊಬರು ದೂರದಿಂದಲೇ ನೋಡುತ್ತಿರುತ್ತಾರೆ. ಆದರೆ ಅದನ್ನು ಮೇಲೆ ಕುಳಿತ ಭಗವಂತ ನೋಡಿ ನಮ್ಮ ಜೀವನದ ಪಾಪ–ಪುಣ್ಯಗಳನ್ನು ಅಳೆಯುತ್ತಾನೆ. ನಮಗೆ ಆಹ್ವಾನಿಸಿ ಸತ್ಕರಿಸಿದ ಕಾರಣ ಮತ್ತಷ್ಟು ನಮ್ಮಲ್ಲಿ ಉತ್ಸಾಹ ಮತ್ತು ಜವಾಬ್ದಾರಿ ಹೆಚ್ಚಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವ–ರಿಯ ವಿಶ್ವವಿದ್ಯಾಲಯದ ಸಂಚಾಲಕಿ ಪವಿತ್ರಾ ಅಕ್ಕಾಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಕಾನಿಪ ಧ್ವನಿ ಸಂಘದ ಅಧ್ಯಕ್ಷ ಪಂಡಿತ ಯಂಪುರೆ, ಪರ್ತಕರ್ತರಾದ ಮಲ್ಲಿಕಾರ್ಜುನ ಅಲ್ಲಾಪೂರ, ಸುದರ್ಶನ ಜಂಗಣ್ಣಿ, ಶಿವಾನಂದ ಆಲಮೇಲ, ಮಹಾಂತೇಶ ನೂಲಾನವರ, ವಸಿಂ ಗೋಗಿ, ರಷೀದ ಕುಮಸಗಿ, ಅಸ್ಪಾಕ್ ಕರ್ಜಗಿ, ಗುಂಡು ಕುಲಕರ್ಣಿ, ಅಂಬರೀಶ ಸುಣಗಾರ, ಬಸವರಾಜ ಹಜೆನವರ, ವಿಜಯಕುಮಾರ ಪತ್ತಾರ, ಆರಿಫ್ ಅಂತರಗಂಗಿ, ತಾನಾಜಿ ಕನಸೆ, ವಿಜಯಕುಮಾರ ತೇಲಿ, ಶಿವನಗೌಡ ಬಿರಾದಾರ, ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ, ಸಂಗಣ್ಣ ಬಿರಾದಾರ, ಬಸವರಾಜ ಕಕ್ಕಳಮೇಲಿ, ರೇವಣಸಿದ್ದ ಪೂಜಾರಿ, ಮಲ್ಲಪ್ಪ ಡೋಣುರ, ಎಂ.ಎಂ.ದೊಡಮನಿ, ಮಲ್ಲಮ್ಮ ವಣಕ್ಯಾಳ, ಸುನಂದಾ ಕಕ್ಕಳಮೇಲಿ, ಮಾದೇವಿ ಪೂಜಾರಿ, ಮಂಜೂಳಾ ಹೂಗಾರ, ಸೀಮಾ ಉಡಚಾಣ, ಮಾದೇವಿ ಕರಲಗಿ, ಕಸ್ತೂರಿಬಾಯಿ ಬಿರಾದಾರ ಸೇ–ರಿದಂತೆ ಅನೇಕರು ಇದ್ದರು.

ಶಿಕ್ಷಕ ಎಸ್.ಬಿ.ಚೌದರಿ ನಿರೂಪಿಸಿ, ವಂದಿಸಿದರು.

# ಶಿಕ್ಷಕ ವೃತ್ತಿಯು ಅಸೂಯೆ ಪಡದ ವೃತ್ತಿ :ಚಂದ್ರಶೇಖರ ಕವಟಗಿ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಅಸೂಯೆ ಪಡದ ವೃತ್ತಿ ಯಾವುದಾದರೂ ಇದ್ರೆ ಅದು ಶಿಕ್ಷಕ ವೃತ್ತಿ ಮಾತ್ರ ಎಂದು ಲಿಂಬೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಟಗಿ ಹೇಳಿದರು.

ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸೇವಾ ನಿವೃತ್ತರಿಗೆ ಗೌರವಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದ ಹಿಂದೂಗಳಲ್ಲಿ ಸೇವೆ ಹುಟ್ಟಿನಿಂದಲೇ ಬರುತ್ತದೆ. ಅದಕ್ಕೊಂದು ನಿದರ್ಶನವೆಂದರೆ ಹಿಂದೂ ಸೇವಾ ಪ್ರತಿಷ್ಠಾನ ಪ್ರಥ–ಮ ನಿರ್ದೇಶಕರಾದ ದಿ.ಅಜೀತ ಕುಮಾರವರ ಕರೆಗೆ ಓಗೊಟ್ಟು ಬಂದ ಲಕ್ಷಾಂತರ ಯುವಕ ಯುವತಿಯರು ನಿಸ್ವಾರ್ಥ ಸೇವೆಯಲ್ಲಿ ಈಗಲೂ ತೊಡಗಿಕೊಂಡಿದ್ದಾರೆ. ಅಂತಹ ಸಾಲಿನಲ್ಲಿ ಉತ್ತರ ಕನ್ನಡದಿಂದ ಉತ್ತರ ಕರ್ನಾಟಕಕ್ಕೆ ಬಂದು ಇಲ್ಲಿಯ ವಾತಾವರಣ, ಆಹಾರ, ವಿಚಾರಗಳಿಗೆ ಹೊಂದಿಕೊಂಡು 4 ದಶಕಗಳ ಸೇವೆ ಸಲ್ಲಿಸಿರುವ ಲೀಲಾ ಭಟ್ಟ ಮತ್ತು ಶಾಂತಾ ಭಟ್ಟ ಮಾತಾಜಿಯವರ ಸೇವೆ ಗಮನಾರ್ಹವಾಗಿದೆ ಎಂದರು.

ಶಾಲೆಯ ಹಿರಿಯ ವಿದ್ಯಾರ್ಥಿ ಉದಯಸಿಂಗ ರಾಯಚೂರ, ಪ್ರಸನ್ನ ಇಲ್ಲೂರ, ಸಿದ್ದರಾಜ ಹೋಳಿ ಸೇರಿದಂತೆ ಹಿರಿಯ ವಿದ್ಯಾರ್ಥಿಗಳು ಅಭಿನಂದಿತರಾದ ಲೀಲಾ ಭಟ್ಟ, ಶಾಂತಾ ಭಟ್ಟ, ಜಿ.ಜೆ.ಪಾದಗಟ್ಟಿ, ಪ್ರಭು ನಾಗಠಾಣ ನಾಲ್ವರ ಸೇವಾದಕ್ಷತೆಯ ಕುರಿತು ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ಬಿ.ಪಿ.ಕುಲಕರ್ಣಿ ಅಧ್ಯಕ್ಷೀಯ ನುಡಿಯಲ್ಲಿ ಅಭಿನಂದಿತರಿಂದ ಸಂಸ್ಥೆಯ ಬೆಳವಣಿಗೆ ಹೇಗೆ ಸಹಕಾರಿಯಾಯಿತು ಮತ್ತು ಅವರ ವೃತ್ತಿ ಜೀವನದ ಕಾಲಘಟ್ಟವನ್ನು ನೆನಪಿಸಿಕೊಟ್ಟರು.

ಈ ವೇಳೆ ಆಡಳಿತ ಮಂಡಳಿಯ ಡಾ. ಎಸ್.ಬಿ.ವಡವಡಗಿ, ಬಿ.ಆರ್. ಓಸ್ವಾಲ, ಜಿ.ಎಸ್.ಓಸ್ವಾಲ್, ಮಾಣಿಕಚಂದ ದಂಡಾವತಿ, ಸುಭಾಸ ಬಿದಿರಕುಂದಿ, ಸದಾನಂದ ನಾಗಠಾಣ, ಡಾ.ಪರಶುರಾಮ ಪವಾರ, ಪುರಸಭೆಯ ಸದಸ್ಯರುಗಳಾದ ಭಾರತಿ ಪಾಟೀಲ್, ಸಂಗಮ್ಮ ದೇವರಳ್ಳಿ, ಪ್ರೀತಿ ದೇಗಿನಾಳ, ಸಹನಾ ಬಡಿಗೇರ, ಸಾಹಿತಿ ಅಶೋಕ ಮಣಿ, ಬಿ.ಎಸ್.ಮೇಟಿ, ಎಮ್. ಎನ.ಯರಝರಿ, ಅರವಿಂದ ಕೊಪ್ಪ, ಎಮ್.ಬಿ.ನಾವದಗಿ ರಾಜಶೇಖರ ಪಾಟೀಲ್, ಚಿದಂಬರ್ ಕಮ್ಮರಕರ್, ಎಸ್.ಎಲ್.ಗುರವ, ಶಂಕರ ಬೇವಿನಗಿಡ, ಬಸವರಾಜ ನಂದಿಕೇಶ್ವರಮಠ, ಮೀನಾಕ್ಷಿ ಕುಲಕರ್ಣಿ, ಶಶಿಕಲಾ ಕಡಿ, ಸುರೇಖಾ ನಾಗಠಾಣ, ಸೋಮನಗೌಡ ಸಾಲವಾಡಗಿ, ಆರತಿ ಪಾದಗಟ್ಟಿ, ಬಾಪುಗೌಡ ಪಾಟೀಲ್, ವಿಕ್ರಮ ಓಸ್ವಾಲ್, ಅಶೋಕ ರೇವಡಿ ಸೇರಿದಂತೆ ಪಾಲಕಕರು, ಗಣ್ಯರು ಹಾಜರಿದ್ದರು.

ಗುರುಮಾತೆ ರಂಜಿತಾ ಹೆಗಡೆ ಪ್ರಾರ್ಥಿಸಿದರು, ಪ್ರಾಚಾರ್ಯ ಅರುಣ ಹುನಗುಂದ ಸ್ವಾಗತಿಸಿದರು. ಕಾರ್ಯದರ್ಶಿ ಪ್ರಭು ಕಡಿ ಪ್ರಾಸ್ತಾವಿಕ ಮಾತನಾಡಿದರು.

ಶಿಕ್ಷಕ ಮಂಜುನಾಥ ಪಡದಾಳಿ ನಿರೂಪಿಸಿದರು. ಮುಖ್ಯಗುರು ರಾಮಚಂದ್ರ ಹೆಗಡೆ ವಂದಿಸಿದರು.

ತಾಳಿಕೋಟಿಯಲ್ಲಿ ಕಟ್ಟಡ ಕಾಮಗಾರಿ ಪರಿಶೀಲಿಸಿದ ಡಿಸಿ ಟಿ.ಭೂಬಾಲನ್ ಅಧಿಕಾರಿಗಳಿಗೆ ಸೂಚನೆ

# ಇಂದಿರಾ ಕ್ಯಾಂಟೀನ್ ಕಾಮಗಾರಿ ಆದಷ್ಟು ಬೇಗ ಪೂರ್ಣಗೊಳಿಸಿ

ಉದಯರಶ್ಮಿ ನ್ಯೂಸ್

ವಿಜಯಪುರ: ಪ್ರಗತಿಯಲ್ಲಿರುವ ಇಂದಿರಾ ಕ್ಯಾಂಟೀನ ಕಾಮಗಾ–ರಿಗೆ ವೇಗ ನೀಡಿ ನಿಗದಿತ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ತಾಳಿಕೋಟಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಪಟ್ಟಣದ ಹುಣಸಗಿ ರಸ್ತೆಯಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ ಇಂದಿರಾ ಕ್ಯಾಂಟೀನ ಕಟ್ಟಡದ ನಿರ್ಮಾಣ



ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು. ಈ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು. ಕಟ್ಟಡವು ಗುಣಮಟ್ಟದಿಂದ ಕೂಡಿರುವಂತೆ ನೋಡಿಕೊಳ್ಳಬೇಕು. ಕ್ಯಾಂಟೀನ ಸುತ್ತ ಕಂಪೌಂಡ್ ನಿರ್ಮಿಸಿ, ಫ್ಲೋರಿಂಗ್ ಮಾಡಲು ತಾಳಿಕೋಟಿಯ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಹಳೆಯ ಪುರಸಭೆಯ ಆವರಣದಲ್ಲಿನ ಗ್ರಂಥಾಲಯ ಕಟ್ಟಡವನ್ನು ಪರಿಶೀಲನೆ ನಡೆಸಿದ ಅವರು, ಈಗಿರುವ ಗ್ರಂಥಾಲಯದ ಪಕ್ಕದಲ್ಲಿರುವ ಖಾಲಿ ಜಾಗೆಯಲ್ಲಿ ಆಧುನಿಕ ಸೌಲಭ್ಯಯುಳ್ಳ ಅತ್ಯುತ್ತಮ ಸ್ಮಾರ್ಟ ಗ್ರಂಥಾಲಯ ನಿರ್ಮಾಣ–ಕ್ಕಾಗಿ ನೀಲ ನಕ್ಷೆ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಜಿಲ್ಲಾ ಕೌಶಲ್ಯಾಭಿವೃದ್ಧಿಕಾರಿ ಸಿ.ಬಿ ಕುಂಬಾರ, ತಾಳಿಕೋಟಿ ತಹಶೀಲ್ದಾರ ಪ್ರೇಮಸಿಂಗ್ ಪವಾರ, ಮುಖ್ಯಾಧಿಕಾರಿ ಮೋಹನ ಜಾಧವ, ಆರೋಗ್ಯ ನಿರೀಕ್ಷಕರಾದ ಶಿವಾನಂದ ಜುಮನಾಳ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಚಲವಾದಿ ಸಮಾಜದ ಪ್ರತಿಭಾ ಪುರಸ್ಕಾರಕ್ಕೆ ನೊಂದಣಿಗೆ ಕರೆ

ಉದಯರಶ್ಮಿ ನ್ಯೂಸ್

ವಿಜಯಪುರ: ಭೀಮಸೇನಾ ಕರ್ನಾಟಕ ರಾಜ್ಯ ಸರಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘ ಜಿಲ್ಲಾ ಘಟಕ ವಿಜಯಪುರ ಇದರ ವತಿಯಿಂದ ಸನ್ 2023–24 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ. 90 ಕ್ಕಿಂತ ಹೆಚ್ಚು ಅಂಕ ಪಡೆದ ಚಲವಾದಿ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಹಾಗೂ 01–07–2023 ರಿಂದ 30–06–2024ರ ಅವಧಿಯಲ್ಲಿ ನಿವೃತ್ತಗೊಂಡ ನೌಕರ–ರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಕಾರಣ 2023–24 ನೇ ಸಾಲಿನ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ, 90ಕ್ಕಿಂತಲೂ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ದಿ :20–07–2024 ರ ಒಳಗೆ ತಮ್ಮ ಹೆಸರು ನೊಂದಾಯಿಸಿಕೊಳ್ಳುವವರು ತಮ್ಮ ಸ್ವ ವಿವರಗಳೊಂದಿಗೆ ವಿಜಯಾನಂದ ಮುದ್ದೇಬಿಹಾಳ ಪ್ರಧಾನ ಕಾರ್ಯದರ್ಶಿ ಮೊಬೈಲ್ ನಂ 9663399345, ಎಚ್.ಬಿ.ಸಿಂಗೆ ವಿಭಾಗೀಯ ಸಂಯೋಜಕರು ಮೊಬೈಲ್ ನಂ. 974114007, ರಾವುಸಾಹೇಬ್ ಗವಾರಿ ಜಿಲ್ಲಾಧ್ಯಕ್ಷರು ಮೊಬೈಲ್ ನಂ .7483251690, ಮುದ್ದಣ್ಣ ಭೀಮನಗರ ರಾಜ್ಯ ಸಹ ಕಾರ್ಯದರ್ಶಿ ಮೊಬೈಲ್ ನಂ. 7019223615 ಇವರಲ್ಲಿ ತಮ್ಮ ವಿವರಗಳೊಂದಿಗೆ ತಮ್ಮ ಹೆಸರನ್ನು ನೊಂದಾಯಿಸಲು ಪ್ರಕಟಣೆಯ ಮೂಲಕ ತಿಳಿಸಲಾಗಿದೆ.

# ಅಕ್ಕಮಹಾದೇವಿ ವಿವಿದಲ್ಲಿ ಹಾಸ್ಟೆಲ್ ಆರಂಭಕ್ಕೆ ದವಿಪ ಆಗ್ರಹ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರ ದಲ್ಲಿರುವ ಅಕ್ಕಮಹಾದೇವಿ ಮಹಿಳಾ ವಿಶ್ವ ವಿದ್ಯಾಲಯದಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ನೂತನ ವಸತಿ ನಿಲಯ ಮಂಜೂರು ಮಾಡಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಋಷಿ ಆನಂದ್ ರವರಿಗೆ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಮನವಿ ಸಲ್ಲಿಸಲಾಯಿತು

ಮನವಿ ಸಲ್ಲಿಸಿ ಮಾತನಾಡಿದ ದಲಿತ ವಿದ್ಯಾರ್ಥಿ ಪರಿಷತ್ ಮುಖಂಡ, ಅಕ್ಷಯಕುಮಾರ್ ಅಜಮನಿ ರಾಜ್ಯದ ಹಾಗೂ ವಿಜಯಪುರ ಜಿಲ್ಲೆಯಲ್ಲಿರುವ ಏಕೈಕ ಮಹಿಳಾ ವಿಶ್ವವಿದ್ಯಾಲಯವಾದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ರಾಜ್ಯದ ನಾನಾ ಭಾಗಗಳಿಂದ ಉನ್ನತ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿಗಳು ಆಗಮಿಸುತ್ತಿದ್ದಾರೆ, ಈ ವರ್ಷವೂ ಕೂಡಾ ಹೆಚ್ಚಿನ ವಿದ್ಯಾರ್ಥಿನಿಯರು ಕೋರ್ಸ್ ಗಳಿಗೆ ಪ್ರವೇಶ ಪಡೆದುಕೊಂಡಿರುವುದರಿಂದ ವಿದ್ಯಾರ್ಥಿಗಳಿಗೆ ಕ್ಯಾಂಪಸ್‌ನಲ್ಲಿ ಈಗಿರುವ ವಸತಿ ನಿಲಯಗಳಲ್ಲಿ ಅವಕಾಶ ಸಿಗದೇ ಹೊರಗಡೆ ರೂಮ್ ಮಾಡಿಕೊಂಡು ಓದುವುದು ಕಷ್ಟದ ಸಂಗತಿ ಆಗಿದೆ. ಅದರಲ್ಲೂ ಕಾಲೇಜಿನ ಸಮಯಕ್ಕೆ ಸರಿಯಾಗಿ ಬಸ್‌ಗಳಿಲ್ಲದೆ ಕ್ಲಾಸ್‌ಗಳನ್ನು ತಪ್ಪಿಸುವ ಸಂಭವ ಉಂಟಾಗಿದೆ. ಪ್ರತಿದಿನ ಕಾಲೇಜಿನಿಂದ ರೂಮಿಗೆ ರೂಮಿನಿಂದ ಕಾಲೇಜಿಗೆ ಓಡಾಡುವದ–ರಿಂದ ವಿದ್ಯಾಭ್ಯಾಸದಲ್ಲಿ ಕುಂಠಿತವಾಗುತ್ತಿದೆ. ಅದಕ್ಕಾಗಿ ಹೆಣ್ಣು ಮಕ್ಕಳ ರಕ್ಷಣೆ ಮತ್ತು ಹಿತ ದೃಷ್ಟಿಯಿಂದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ರಾಜ್ಯ ಸರ್ಕಾರ ನೂತನವಾಗಿ ಮಂಜೂರಾಗಿರುವ ವಸತಿ ನಿಲಯಗಳಲ್ಲಿ ಎರಡನ್ನು ವಿಶ್ವವಿದ್ಯಾಲಯದ ಕ್ಯಾಂಪಸ್ ಒಳಗಡೆ ಸ್ಥಾಪಿಸಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾದೇಶ್ ಚಲವಾದಿ, ಸತೀಶ್ ಅಂಜುಟಗಿ , ಯಾಷಿನ್ ಇನಾಮದಾರ್, ಸಂದೇಶ್ ಕುಮಟಗಿ, ರವಿ ವಾಲಿಕಾರ, ಪ್ರವೀಣ ಬನಸೋಡೆ, ಮಾಂತೇಶ ಚಲವಾದಿ, ಯುವರಾಜ್ ಓಲೇಕಾರ ಸೇರಿದಂತೆ ಹಲವರು ಭಾಗಿಯಾಗಿದ್ದರು.

# ಜು.6ರಂದು ಹೋಬಳಿ ಮಟ್ಟದ 14 ಗ್ರಾಮಗಳಲ್ಲಿ ಪಿಂಚಣಿ ಅದಾಲತ್

ಉದಯರಶ್ಮಿ ನ್ಯೂಸ್

ವಿಜಯಪುರ: ಪಿಂಚಣಿದಾರರ ಅಹವಾಲು ಆಲಿಸಲು ಹಾಗೂ ಅರ್ಹರಿಗೆ ಪಿಂಚಣಿ ಮಂಜೂರು ಮಾಡುವ ಕುರಿತ ಸಾಮಾಜಿ–ಕ ಭದ್ರತಾ ಯೋಜನೆಯಡಿಯ ಜಿಲ್ಲೆಯ 14 ಗ್ರಾಮಗಳಲ್ಲಿ ಜುಲೈ 6 ರಂದು ಹೋಬಳಿ ಮಟ್ಟದ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.

ಜುಲೈ 6 ರ ಬೆಳಗ್ಗೆ 11 ಗಂಟೆಗೆ ಹಗರಗುಂಡ ಗ್ರಾಮದ ಸಂತ ಸೇವಾಲಾಲ ದೇವಸ್ಥಾನದಲ್ಲಿ ವಿಜಯಪುರದ ಉಪ ವಿಭಾಗಾಧಿಕಾ–ರಿಗಳು , ಅಂಬಳನೂರು ಗ್ರಾಮದ ಅಡಿವೆಪ್ಪಾ ಮುತ್ಯಾ ದೇವಸ್ಥಾನದಲ್ಲಿ ಇಂಡಿ ಉಪವಿಭಾಗಾಧಿಕಾರಿಗಳು ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ವಿಜಯಪುರ ಗ್ರೇಡ್ 2 ತಹಶೀಲ್ದಾರ್ ಅವರು ಕುಮಟಗಿ ಗ್ರಾಮದ ಗ್ರಾಮ ಚಾವಡಿಯಲ್ಲಿ, ತಿಕೋಟಾದ ಗೇಡ್ 2 ತಹಶೀಲ್ದಾರ್ ಅವರು ಧನರ್ಗಿ ಗ್ರಾಮದ ಶ್ರೀ ಹನುಮಾನ ದೇವಸ್ಥಾನದಲ್ಲಿ, ಬಬಲೇಶ್ವರ ಗ್ರೇಡ್ 2 ತಹಶೀಲ್ದಾರ್ ಇವರು ಶೇಗುಣಸಿ ಗ್ರಾಮದ ಮಾರುತಿ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಬಸವನ ಬಾಗೇವಾಡಿಯ ಗ್ರೇಡ್ 2 ತಹಶೀಲ್ದಾರ್ ಇವರು ಮುತ್ತಗಿ ಗ್ರಾಮದ ಶಿವನ ಗುಡಿಯಲ್ಲಿ, ಕೋಲಾರ ತಹಶೀಲ್ದಾರ ಅವರು ತಲೇವಾಡ ಗ್ರಾಮದ ರಾಜೀವ ಗಾಂಧಿ ಸೇವಾ ಕೇಂದ್ರದಲ್ಲಿ, ನಿಡಗುಂದಿ ಗ್ರೇಡ್ 2 ತಹಶೀಲ್ದಾರ್ ಇವರು ದೇವಲಾಪೂರ ಗ್ರಾಮದ ದುರ್ಗಾದೇವಿ ದೇವಸ್ಥಾನದಲ್ಲಿ, ಮುದ್ದೇಬಿಹಾಳ ಗ್ರೇಡ್ 2 ತಹಶೀಲ್ದಾರ ಇವರು ಖೀಲಾರಹಟ್ಟಿ ಗ್ರಾಮದ ಗದ್ದೆಮ್ಮನ ಕಟ್ಟಿಯಲ್ಲಿ, ತಾಳಿಕೋಟಿ ತಹಶೀಲ್ದಾರ್ ಅವರು ತುರಕನಗೇರಿ ಗ್ರಾಮದ ಮಾರುತಿ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.



ಇಂಡಿ ಗ್ರೇಡ್ 2 ತಹಶೀಲ್ದಾರ್ ಇವರು ಹೋರ್ತಿ ಗ್ರಾಮ ಪಂಚಾಯತಿಯಲ್ಲಿ, ಚಡಚಣದ ಗ್ರೇಡ್ 2 ತಹಶೀಲ್ದಾರ್ ಇವರು ಗೋಡಿಹಾಳ ಗ್ರಾಮದ ಬಿಸಿಲ ಸಿದ್ಧರಾಯ ದೇವಸ್ಥಾನದಲ್ಲಿ, ಸಿಂದಗಿಯ ಗ್ರೇಡ್ 2 ತಹಶೀಲ್ದಾರ ಅವರು ಬ್ರಹ್ಮದೇವನಮಡು ಗ್ರಾಮ ಹಾಗೂ ಆಲಮೇಲ ತಹಶೀಲ್ದಾರ ಇವರು ಉಚಿತನಾವದಗಿಯ ಸರ್ಕಾರಿ ಹೆಣ್ಣುಮಕ್ಕಳ ಶಾಲೆಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಪಿಂಚಣಿ ಅದಾಲತ್ ನಡೆಯುವ ಗ್ರಾಮಗಳಲ್ಲಿ ಸಾಮಾಜಿಕ ಭದ್ರತೆಯ ಪಿಂಚಣಿ ಫಲಾನುಭವಿಗಳಿಗೆ ಎನ್ ಪಿ ಸಿ ಐ ಮ್ಯಾಪಿಂಗ್ ಕಾರ್ಯವನ್ನು ಸಂಬಂಧಿಸಿದ ಬ್ಯಾಂಕ್ ಹಾಗೂ ಅಂಚೆ ಕಚೇರಿಯ ಅಧಿಕಾ–ರಿಗಳ ಸಹಯೋಗದೊಂದಿಗೆ ಮಾಡಬೇಕು. ಪಿಂಚಣಿದಾರರ ಮಾಹಿತಿಯೊಂದಿಗೆ ಈ ಎಲ್ಲಾ ಗ್ರಾಮಗಳ ಗ್ರಾಮಲೆಕ್ಕಾಧಿಕಾರಿಗಳು, ಪಂಚಾಯತ್ ಕಾರ್ಯದರ್ಶಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾ–ರಿಗಳು ಹಾಗೂ ಅಂಚೆ ಕಚೇರಿ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಾಗುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

ರಾಜ್ಯ ಚುನಾವಣಾ ಆಯೋಗದ ಮಾನಿಟರಿಂಗ್ ಸೆಲ್ ಹಿರಿಯ ಮಾರ್ಗದರ್ಶಕ ಬಿ.ಎಸ್.ಹಿರೇಮಠ ಅಭಿಮತ

# ಮತದಾರರಲ್ಲಿ ಅರಿವು ಮೂಡಿಸುವಲ್ಲಿ ಐ.ಎಲ್.ಸಿ ಗಳ ಪಾತ್ರ ಮುಖ್ಯ

ಉದಯರಶ್ಮಿ ನ್ಯೂಸ್



ವಿಜಯಪುರ: ಮುಕ್ತ ಹಾಗೂ ಪಾರದರ್ಶಕದಿಂದ ಕೂಡಿದ ಚುನಾವಣೆ ಅತೀ ಅವಶ್ಯಕ. ಇದರಿಂದ ಸುಭದ್ರ ಪ್ರಜಾಪ್ರಭುತ್ವ ನಿರ್ಮಾಣ ಆಗುತ್ತದೆ ಹಾಗೂ ಉತ್ತಮ ಸರ್ಕಾರ ರಚನೆಯಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲ ಮತದಾರರ ಸಾಕ್ಷರತಾ ಕ್ಲಬ್(ಇ ಎಲ್ ಸಿ) ಗಳು ಮಕ್ಕಳಲ್ಲಿ ಅರಿವನ್ನು ಮೂಡಿಸುವ ಕಾರ್ಯ ಮಾಡಬೇಕು ಎಂದು ರಾಜ್ಯ ಚುನಾವಣಾ ಆಯೋಗದ ಮಾನಿಟರಿಂಗ್ ಸೆಲ್ನ ಹಿರಿಯ ಮಾರ್ಗದರ್ಶಕರಾದ ಬಿ. ಎಸ್. ಹಿರೇಮಠ ಅವರು ಕರೆ ನೀಡಿದರು.

ಗುರುವಾರ ವಿಜಯಪುರ ನಗರದ ಬಾಲಕಿಂ–ಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ 2024– 25ನೇ ಸಾಲಿನ "ಮತದಾರರ ಸಾಕ್ಷರತಾ ಕ್ಲಬ್" ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪದವಿಪೂರ್ವ ಕಾಲೇಜುಗಳ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿಗಳಾದ ಎಂ. ಬಿ. ರಜಪೂತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡು ಮಕ್ಕಳಲ್ಲಿ ಮತದಾನದ ಕುರಿತು ಜಾಗೃತಿ ಮೂಡಿಸಬೇಕು, ಇಂದಿನ ಮಕ್ಕಳೇ ನಾಳಿನ ನಾಗರಿಕರು. ಈಗಿನಿಂದಲೇ ಯುವಜನರಿಗೆ ಮತದಾನ ಮಹತ್ವದ ಕುರಿತು ತಿಳುವಳಿಕೆ ನೀಡಿ ಉತ್ತಮ ನಾಗರಿಕರಾಗಿ, ಸಮಾಜದ ಇತರರಿಗೂ ಮಾರ್ಗದರ್ಶನ ನೀಡುವಂತಾಗಬೇಕು. ಜಿಲ್ಲೆಯಲ್ಲಿ ಈಗಾಗಲೇ ಸ್ವೀಪ್ ಸಮಿತಿ ಹಾಗೂ ಇ.ಎಲ್.ಸಿ ಚಟುವಟಿಕೆಗಳಿಂದ ಮತದಾನದ ಪ್ರಮಾಣ ಹೆಚ್ಚಾಗಿದ್ದು ಅತೀವ ಸಂತಸ. ಮುಂಬರುವ ಚುನಾವಣೆಗಳಲ್ಲಿಯೂ ಸಹ ಮತದಾನ ಪ್ರಮಾಣ ಹೆಚ್ಚಿಸುವಲ್ಲಿ ಶ್ರಮಿಸೋಣ ಎಂದರು.

ಈ ಸಂದರ್ಭದಲ್ಲಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಸಿ. ಬಿ. ನಾಟಿಕಾರ, ಗ್ರೇಡ್–2 ತಹಶೀಲ್ದಾರರಾದ ತುಂಬಗಿ, ಜಿಲ್ಲಾ ಪಂಚಾಯತಿಯ ರಾವ್ ಬಹಾದ್ದೂರ್ ಭಾಗವಾನ, ಹಿರಿಯ ಉಪನ್ಯಾಸಕರಾದ ಎಸ್. ಸಿ. ತೋಳನೂರ, ಉಪನ್ಯಾಸಕಿ ಎಂ. ಎಸ್. ಮಾಲಿ, ಇನ್ನೋರ್ವ ಉಪನ್ಯಾಸಕ ಪಾಟೀಲ, ಹಾಗೂ ಆರ್. ಸಿ ಹಿರೇಮಠ ಹಾಗೂ ಇತರರು ಉಪಸ್ಥಿತರಿದ್ದರು.

# ರೇವಣಸಿದ್ಧೇಶ್ವರ ದೇವರ ಬೆಳ್ಳಿಯ ಉತ್ಸವಮೂರ್ತಿ ಮೆರವಣಿಗೆ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ತಾಲೂಕಿನ ಇಂಗಳೇಶ್ವರ ಗ್ರಾಮದ ಆರಾಧ್ಯದೈವ ಜಗದ್ಗುರು ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ರೇವಣಸಿದ್ದೇಶ್ವರ ದೇವರ ಬೆಳ್ಳಿಯ ಉತ್ಸವ ಮೂರ್ತಿ ಹಾಗೂ ರೇವಣಸಿದ್ದೇಶ್ವರ ಗುಡ್ಡದಲ್ಲಿರುವ ಅಕ್ಕನಾಗಮ್ಮನ ಗುಹೆಯಲ್ಲಿ ಪ್ರತಿಷ್ಠಾಪಿಸುವ ಅಕ್ಕನಾಗಮ್ಮ, ಬಸವಣ್ಣನವರ ಹಾಗೂ ಚನ್ನಬಸವಣ್ಣನವರ ಮೂರ್ತಿಗಳ ಭವ್ಯ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿವಿಧ ವಾದ್ಯಮೇಳದೊಂದಿಗೆ ಅದ್ದೂರಿಯಾಗಿ ಶುಕ್ರವಾರ ಜರುಗಿತು.

ಗ್ರಾಮದ ಹಾಲಭಾವಿಯಿಂದ ಆರಂಭವಾದ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಿ ರೇವಣಸಿದ್ದೇಶ್ವರ ಗುಡ್ಡಕ್ಕೆ ಮೂರ್ತಿಗಳು ತಲುಪಿದವು. ಮೆರವಣಿಗೆ ಸಾಗುವ ಮಾರ್ಗದಲ್ಲಿ ಆಯಾ ಪ್ರದೇಶದ ಮಹಿಳೆಯರು ರಂಗೋಲಿ ಚಿತ್ತಾರ ಹಾಕುವ ಮೂಲಕ ಶರಣರ ಮೂರ್ತಿಗಳಿಗೆ ಭವ್ಯ ಸ್ವಾಗತ ಕೋರಿದರು. ಮೆರವಣಿಗೆಯಲ್ಲಿ ಮಹಿಳೆಯರ ಕುಂಭದೊಂದಿಗೆ ವಚನದ ಕಟ್ಟನ್ನು ತಲೆ ಮೇಲೆ ಹೊತ್ತ ಮಕ್ಕಳು, ವಿವಿಧ ಶಾಲಾ ವಿದ್ಯಾರ್ಥಿಗಳು ಬಸವೇಶ್ವರ, ಅಕ್ಕನಾಗಮ್ಮ, ಅಕ್ಕಮಹಾದೇವಿ, ಚನ್ನಬಸವಣ್ಣ, ಅಂಬಿಗರ ಚೌಡಯ್ಯ, ಒನಕೆ ಒಬ್ಬವ್ವ ಸೇರಿದಂತೆ ವಿವಿಧ ಶರಣರ ವೇಷಭೂಷಣ ಧರಿಸಿ ಭಾಗವಹಿಸಿದ್ದು ಮೆರವಣಿಗೆಗೆ ಮೆರಗು ತಂದರು. ಮೆರವಣಿಗೆಯಲ್ಲಿ ಡೊಳ್ಳು, ಕರಡಿಮಜಲು, ಭಜನಾ ತಂಡಗಳು ಕಂಡುಬಂದವು. ಮೆರವಣಿಗೆಯಲ್ಲಿ ಸಿದ್ದೇಶ್ವರ ಟ್ರಸ್ಟ್ ಕಮೀಟಿ ಪದಾಧಿಕಾರಿಗಳು ಹಾಗೂ ರಾಷ್ಟ್ರಧರ್ಮ ವೇದಿಕೆಯ ಸದಸ್ಯರು ಸೇರಿದಂತೆ ಅಪಾರ ಸಂಖ್ಯೆಯ ಜನರು ಭಾಗವಹಿಸಿದ್ದರು.

ಜು. 7 ರಂದು ಪ್ರಾತಃ–ಕಾಲದಲ್ಲಿ ಅಕ್ಕನಾಗಮ್ಮ ಗುಹೆಯಲ್ಲಿ ವಿವಿಧ ಶ್ರೀಗಳ ಸಾನಿಧ್ಯದಲ್ಲಿ ಬರಡೋಲದ ವೇದಮೂರ್ತಿ ವಿಶ್ವನಾಥ ಶಾಸ್ತ್ರೀಜಿಯವರಿಂದ ಅಕ್ಕನಾಗಮ್ಮ, ಬಸವಣ್ಣನವರ, ಚನ್ನಬಸವಣ್ಣನವರ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ, ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ರೇವಣಸಿದ್ದೇಶ್ವರ ದೇವರ ಬೆಳ್ಳಿಯ ಉತ್ಸವ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ನೆರವೇರುವುದು ಎಂದು ಕಾರ್ಯಕ್ರಮದ ಸಂಘಟಕರು ತಿಳಿಸಿದರು.

# ಬಸವನಬಾಗೇವಾಡಿ: ಸಂಭ್ರಮದ ಮಣ್ಣೆತ್ತಿನ ಅಮವಾಸ್ಯೆ ಆಚರಣೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣ ಸೇರಿದಂತೆ ತಾಲೂಕಿನ ವಿವಿಧೆಡೆ ಶುಕ್ರವಾರ ಮಣ್ಣೆತ್ತಿನ ಅಮವಾಸ್ಯೆಯನ್ನು ರೈತ ಬಾಂಧವರು, ಜನರು ಮಣ್ಣೆತ್ತುಗಳಿಗೆ ಪೂಜೆ ಸಲ್ಲಿಸುವ ಮೂಲಕ ಸಡಗರ, ಸಂಭ್ರಮದಿಂದ ಆಚರಿಸಿದರು. ಅಮವಾಸ್ಯೆ ಹಿನ್ನೆಲೆಯಲ್ಲಿ ಐತಿಹಾಸಿಕ ಮೂಲನಂದೀಶ್ವರ (ಬಸವೇಶ್ವರ) ದೇವಸ್ಥಾನಕ್ಕೆ ವಿವಿಧೆಡೆಗಳಿಂದ ಅಪಾರ ಸಂಖ್ಯೆಯ ಭಕ್ತರು ಆಗಮಿಸಿ ದೇವರ ದರ್ಶನ ಪಡೆದುಕೊಂಡರು.

ಮಕ್ಕಳೊಂದಿಗೆ ಮಾರುಕಟ್ಟೆಗೆ ತೆರಳಿದ ಜನರು ವಿವಿಧೆಡೆ ಮಣ್ಣೆತ್ತುಗಳ ದರ ಚೌಕಾಸಿ ಮಾಡಿ ಮಕ್ಕಳಿಗೆ ಇಷ್ಟವಾದ ಬಣ್ಣ ಹಚ್ಚಿದ ಅಲಂಕಾರಿಕ ಮಣ್ಣೆತ್ತುಗಳನ್ನು ಖರೀದಿಸಿದರೆ ಇನ್ನೂ ಕೆಲವರು ಬಣ್ಣ ಹಚ್ಚದೇ ಇರುವ ಮಣ್ಣೆತ್ತುಗಳೊಂದಿಗೆ ಪೂಜಾ ಸಾಮಗ್ರಿಗಳನ್ನು ಖರೀದಿಸಿದರು. ಮಾರುಕಟ್ಟೆಯಲ್ಲಿ ಮಣ್ಣಿನಿಂದ ತಯಾರಿಸಿದ ಹಾಗೂ ಬಣ್ಣದಿಂದ ಸಿಂಗರಿಸಿದ ವಿವಿಧ ಬಗೆಯ ಪಿಓಪಿ ಮಣ್ಣೆತ್ತುಗಳು ಆಕಾರಕ್ಕೆ ತಕ್ಕಂತೆ ರೂ. 50 ರಿಂದ ರೂ. 2000 ವರೆಗೆ ಮಾರಾಟವಾದವು.

ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗಲ್ಲಿಗಳಲ್ಲಿ ಅಲಂಕಾರಿಕ ಮಂಟಪ ಹಾಕಿ ಮಧ್ಯಾಹ್ನ, ಸಂಜೆ ಮಣ್ಣೆತ್ತುಗಳನ್ನು ಪ್ರತಿಷ್ಠಾಪಿಸುತ್ತಿರುವುದು ಕಂಡು ಬಂದಿತು.ಮನೆಯಲ್ಲಿ ದೇವರ ಜಗುಲಿಯ ಮೇಲೆ, ಕೆಲವರು ಮನೆಯಲ್ಲಿ ಮಂಟಪದಲ್ಲಿ ಮಣ್ಣೆತ್ತುಗಳನ್ನು ಪ್ರತಿಷ್ಠಾಪಿಸಿದ ನಂತರ ಕುಟುಂಬ ಸದಸ್ಯರೆಲ್ಲರೂ ಪೂಜೆ ಸಲ್ಲಿಸಿ ಕಾಯಿ, ಕರ್ಪೂರದೊಂದಿಗೆ ನೈವೇದ್ಯ ಅರ್ಪಿಸಿ ಮಳೆ, ಬೆಳೆ ಸಮೃದ್ಧಿಯಾಗಲೆಂದು ಪ್ರಾರ್ಥಿಸಿದರು. ಮಣ್ಣೆತ್ತಿನ ಪೂಜೆಯ ನಂತರ ಹಬ್ಬದ ಅಂಗವಾಗಿ ತಯಾ–ರಿಸಲಾಗಿದ್ದ ವಿಶೇಷ ಖಾದ್ಯಗಳಾದ ಹೋಳಿಗೆ, ಕರ್ಚಿಕಾಯಿ, ಕರಿಗಡುಬು, ಪಾಯಸವನ್ನು ಕುಟುಂಬ ಸದಸ್ಯರು ಸವಿದರು.

ಶುಕ್ರವಾರ ಮಧ್ಯಾಹ್ನ 5 ನಿಮಿಷ ಜೋರಾದ ಮಳೆ ಸುರಿಯಿತು. ನಂತರ ಕೆಲ ಹೊತ್ತು ಬಿಸಿಲು ಬಿದ್ದಿತಾದರೂ ಸಂಜೆ 5 ಗಂಟೆ ಸುಮಾರಿಗೆ ಜಿಟಿ ಜಿಟಿ ಮಳೆ ಆರಂಭವಾಗಿರುವದು ಬಿತ್ತನೆ ಮಾಡಿರುವ ರೈತ ಬಾಂಧವರ ಮುಖದಲ್ಲಿ ಮಂದಹಾಸ ಮೂಡಿದೆ. ಮೋಡ ಕವಿದ ವಾತಾವರಣ ಮುಂದುವರಿದಿತ್ತು.

ತಾಲೂಕಿನ ಮನಗೂಳಿ ಪಟ್ಟಣದ ಭೀಮರಾವ ಕುಂಬಾರ ಅವರು ಈ ಸಲ ಬಣ್ಣ ಹಚ್ಚಿದ್ದ ಮಣ್ಣೆತ್ತುಗಳನ್ನು ಗುರುವಾರ ಮಾರಾಟಕ್ಕೆ ತಂದಿದ್ದರು. ಅವರು ರಾತ್ರಿ ಒಂಭತ್ತು ಗಂಟೆಯೊಳಗೆ ಬಣ್ಣ ಹಚ್ಚಿದ್ದ ತಾವು ತಂದಿದ್ದ ಎಲ್ಲ ಮಣ್ಣೆತ್ತುಗಳನ್ನು ರೂ 50 ರಿಂದ 100 ರವರೆಗೆ ಮಾರಾಟ ಮಾಡಿ ನಮ್ಮ ಊರಿಗೆ ಹೋದೆ ಎಂದು ಶುಕ್ರವಾರ ಪತ್ರಿಕೆಗೆ ತಿಳಿಸಿದರು.

ಪಟ್ಟಣದ ಗದಿಗೆಪ್ಪ ಕುಂಬಾರ ಅವರು, ಈ ಸಲ ಮೂರುವರೆ ಸಾವಿರ ಜೋಡಿ ಅಲಂಕಾರಿಕ ಪಿಓಪಿ ಎತ್ತುಗಳು ಮಾರಾಟ ಆಗಿವೆ. ಲಾಭ ಬಹಳ ನೋಡದೇ ಮಾರಾಟ ಮಾಡಲಾಗಿದೆ. ನಿನ್ನೆ, ಇಂದು ತರಿಸಲಾದ ಎತ್ತುಗಳಲ್ಲಿ ಸ್ವಲ್ಪ ಮಾತ್ರ ಮಾರಾಟವಾಗಿ ಒಂದೂವರೆ ಸಾವಿರ ಜೋಡಿ ಉಳಿದುಕೊಂಡಿವೆ. ನಮಗೆ ಮಣ್ಣೆತ್ತಿನ ಮಾರಾಟದಿಂದಾಗಿ ಅಷ್ಟಾಗಿ ಲಾಭವಾಗದೇ ಹೋದರೂ ಸಂಪ್ರದಾಯದಂತೆ ಮಣ್ಣೆತ್ತು ಮಾರಾಟ ಮಾಡಲಾಗುವುದು ಎಂದು ಹೇಳಿದರು.



# ಪಂಢರಾಪುರಕ್ಕೆ ಭಕ್ತಾದಿಗಳ ಪಾದಯಾತ್ರೆ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಪಂಡರಪುರ ವಿಠ್ಠಲನ ಆಷಾಢ ಮಾಸದ ಉತ್ಸವದಲ್ಲಿ ಪಾಲ್ಗೊಳ್ಳಲು ಬಳ್ಳಾರಿ ಜಿಲ್ಲೆಯ ಏಳುಬೆಂಚಿ ಗ್ರಾಮಸ್ಥರು 18ನೇ ವರ್ಷದ ಪಾದಯಾತ್ರೆಯ ಮೂಲಕ ಪ್ರಯಾಣ ಕೈಗೊಂಡರು.

ಪಟ್ಟಣದಲ್ಲಿ ಶುಕ್ರವಾರ ಪ್ರವೇಶಿಸಿದ ದಿಂಡಿ ಯಾತ್ರೆಯ ಪಾದಯಾತ್ರಿಕರು ಅಲ್ಪ ವಿಶ್ರಾಂತಿಯ ನಂತರ ಪ್ರಯಾಣ ಆರಂಭಿಸಿದರು.

ಈ ಸಂದರ್ಭದಲ್ಲಿ ಷಡಕ್ಷರಿ ಮಾತನಾಡಿ, ನಾವು ಕಳೆದ 18 ವರ್ಷಗಳಿಂದ ಪಾದಯಾತ್ರೆ ಕೈಗೊಂಡು ಆಷಾಢ ಮಾಸದ ಉತ್ಸವದಲ್ಲಿ ಪಾಲ್ಗೊಳ್ಳುತ್ತೇವೆ. ನಾವು ಏಳುಬೆಂಚಿ ಗ್ರಾಮದಿಂದ ಕಳೆದ ಜೂನ್ 27 ರಿಂದ ಯಾತ್ರೆ ಆರಂಭಿಸಿದ್ದು, ಇದೇ ತಿಂಗಳ 11 ರಂದು ಪಂಡರಪುರ ತಲುಪಲಿದ್ದೇವೆ. ನಿನ್ನೆಯ ದಿನ ಕೊಂಡಗೂಳಿ ಗ್ರಾಮದ ಆಶ್ರಮದಲ್ಲಿ ತಂಗಿದ್ದು, ಬೆಳಿಗ್ಗೆ ಸ್ನಾನಾದಿಗಳನ್ನು ಮುಗಿಸಿಕೊಂಡು ಯಾತ್ರೆ ಆರಂಭಿಸಿದ್ದೇವೆ ಎಂದರು.

ಪಾದಯಾತ್ರೆಯಲ್ಲಿ ಡಿ.ಪಾಂಡುರಂಗಸ್ವಾಮಿ, ಕೆ.ಜಂಬುನಾಥ, ಶರಣಪ್ಪ, ಪರಮೇಶ, ಕೆ.ಹೊನ್ನುರಸ್ವಾಮಿ, ಎರೆಸ್ವಾಮಿ, ಚಂದ್ರಶೇಖರ, ಓಬಳೇಶ, ಗಂಗಮ್ಮ, ಲಕ್ಷ್ಮೀ, ಶಾಂತಮ್ಮ, ಗಾರಲಿಂಗಪ್ಪ, ತಿಮ್ಮಪ್ಪ, ಶರಣಬಸು ಸೇರಿದಂತೆ ಮಕ್ಕಳು ಇದ್ದರು.



# ಸ್ವಚ್ಛತೆಯಿಂದಲೇ ಉತ್ತಮ ಆರೋಗ್ಯ :ಸವದಿ

ಉದಯರಶ್ಮಿ ನ್ಯೂಸ್

ಚಿಮ್ಮಡ: ಉತ್ತಮ ಆರೋಗ್ಯ ಹೊಂದಲು ನೈರ್ಮಲ್ಯ ಕಾಪಾಡಿಕೊಳ್ಳುವುದು ಬಹು ಮುಖ್ಯವಾಗಿದೆಯೆಂದು ಪ್ರಭುಲಿಂಗೇಶ್ವರ ಇಂಟರನ್ಯಾಷನಲ್ ಸ್ಕೂಲ್‌ನ ಸಂಸ್ಥಾಪಕ ಕಾರ್ಯದರ್ಶೀ ವಿದ್ಯಾಧರ ಸವದಿ ಹೇಳಿದರು.

ಗ್ರಾಮದ ಪ್ರಭುಲಿಂಗೇಶ್ವರ ಇಂಟರನ್ಯಾಷನಲ್ ಸ್ಕೂಲ್‌ನಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮದ ಉದ್ಘಾಟಣೆ ನೆರವೇರಿಸಿ ಮಾತನಾಡಿದ ಅವರು ದೇಶದ ಜನರಲ್ಲಿ ಆರೋಗ್ಯದ ಅರಿವು ಮೂಡಿಸಲು ಆಚರಿಸಲಾಗುವ ಈ ದಿನಾಚರಣೆಗಳಿಂದ ಶಾಲಾ ಮಕ್ಕಳಲ್ಲಿ ಹಾಗೂ ಪಾಲಕರಲ್ಲಿ ಶುಚಿತ್ವದ ಮಹತ್ವಮನವರಿಕೆ ಮಾಡಬೇಕಾಗಿದೆ, ಪ್ರತಿಯೊಬ್ಬರು ನೈರ್ಮಲ್ಯ ಕಾಪಾಡಿಕೊಳ್ಳುವುದರಿಂದ ನೂರಾರು ಕಾಯಿಲೆಗಳಿಂದ ನಾವು ಬಚಾವಾಗಬಹುದೆಂದರು.

"ಮಕ್ಕಳಲ್ಲಿ ನೈರ್ಮಲ್ಯದ ಮಹತ್ವ" ವಿಷಯ ಕುರಿತು ತಜ್ಞವೈದ್ಯರಾದ ಡಾ. ಸೋಮನಾಥ ಬಡೇಮನಿ, ಡಾ. ಸತೀಶ ಮಾಳಿ, ಡಾ. ಕುಮಾರ ಅಥಣಿ ಮಾತನಾಡಿದರು.

ಈ ಶಾಲೆಯನ್ನು ನಿರ್ವಹಿಸುವ ಹಿಪ್ಪೋ ಕ್ಯಾಂಪಸ್ ಉಪಾಧ್ಯಕ್ಷೆ ಶ್ರೀಮತಿ ಲಲಿತಾ ಹಾಗೂ ಪ್ರಾಚಾರ್ಯ ಫಿಲಿಪ್ ಥಾಮಸ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಇದೇ ಸಂಧರ್ಬದಲ್ಲಿ ಶಾಲಾ ವಿದ್ಯಾರ್ಥಿಗಳಿಂದ ಪ್ರಸಕ್ತ ಸಂಧರ್ಭದಲ್ಲಿ ವೈದ್ಯರ ಪಾತ್ರದ ಕುರಿತು ಅಣಕು ಪ್ರದರ್ಶನ ನಡೆಸಲಾಯಿತು.




# ವಿದ್ಯಾರ್ಥಿಗಳ ಸರ್ವತೋಮುಖ ಉನ್ನತಿಗೆ ಎನ್ನೆಸ್ಸೆಸ್ ಸಹಕಾರಿ :ಅವಟಿ

ಉದಯರಶ್ಮಿ ನ್ಯೂಸ್

ವಿಜಯಪುರ: ಶಿಕ್ಷಣ ಸಾಮಾಜಿಕ ಸೇವೆ ಪರಿಸರ ರಕ್ಷಣೆ. ಗ್ರಾಮೀಣ ಜನರ ಬದುಕಿನ ಜೀವನ ಅರಿವು ಮೂಡಿಸಿ ವಿದ್ಯಾರ್ಥಿಗಳ ಸರ್ವತೋಮುಖ ಉನ್ನತಿಗೆ ರಾಷ್ಟೀಯ ಸೇವಾ ಯೋಜನೆ (ಎನ್ ಎನ್ ಎಸ್) ತುಂಬ ಸಹಕಾರಿ ಎಂದು ನ್ಯಾಯವಾದಿ ದಾನೇಶ ಅವಟಿ ನುಡಿದರು.

ನಗರದ ಹೊರವಲಯ ಶ್ರೀ ರಾಮಕೃಷ್ಣ ಆಶ್ರಮದಲ್ಲಿ ವಿದ್ಯಾ ವರ್ಧಕ ಸಂಘದ ದರ್ಬಾರ ಪದವಿ ಮಹಾವಿದ್ಯಾಲಯದ ಎನ್ ಎಸ್ ಎಸ್ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಭಾವೈಕ್ಯತೆ ಗ್ರಾಮಗಳ ಉದ್ಧಾರ ಸಾಮಾಜಿಕ ಜವಾಬ್ದಾರಿ ಯುವಕರ ಸರ್ವಾಂಗೀಣ ಅಭಿವೃದ್ಧಿಗೆ ಕಾರಣವಾದ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಾರ್ಥಿಗಳು ಇಲ್ಲಿ ಕಲಿತ ಪಾಠಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದೆ ಬರಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಜಿ. ಹೆಚ್. ಮಣುರ ಮಾತನಾಡಿ, ಸಮಾಜದಲ್ಲಿ ಇಂದು ಮನುಷ್ಯ ವಿದ್ಯೆ, ಉದ್ಯೋಗ, ಕುಟುಂಬ ನಿರ್ವಹಣೆ ಇದರಲ್ಲಿಯೇ ಮೈ ಮರೆತು ಸಂವಿಧಾನಬದ್ಧವಾಗಿ ತನಗೆ ಬರಬೇಕಾದ ಅನುಕೂಲತೆಗಳ ಬಗ್ಗೆ ಮಾತ್ರ ಯೋಚಿಸುತ್ತಾನೆ. ಹಕ್ಕುಗಳ ಬಗ್ಗೆ ಯೋಚಿಸುವ ನಾವು ನಮ್ಮ ಕರ್ತವ್ಯಗಳ ಬಗ್ಗೆ ಮಾತನಾಡುವದಿಲ್ಲ. ಇಂತಹ ಸ್ವಾರ್ಥ–ರ್ಥ ಬದುಕನ್ನು ಹೋಗಲಾಡಿಸಿ. ಪ್ರೀತಿ, ವಿಶ್ವಾಸ, ಸಹೋದರತ್ವ, ಸಾಮಾಜಿಕ ನ್ಯಾಯ ಪರಿಕಲ್ಪನೆ ಈ ಶಿಬಿರಗಳಲ್ಲಿ ಒಡಮೂಡಲು ಸಾಧ್ಯ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮ ಸಂಯೋಜ–ಕ ರಾಜು ಕಪಾಲಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಉಪನ್ಯಾಸಕ ಆನಂದ ಕುಲಕರ್ಣಿ, ಜಗದೀಶ ಸಾತಿಹಾಳ, ಕಾಶಿನಾಥ್ ಕೋಣನವರ ಉಪಸ್ಥಿತ–ರಿದ್ದರು.

ಅಧ್ಯಕ್ಷತೆಯನ್ನು ಎಂ. ಕೆ. ಕುಡಚಿ, ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿಯಾದ ಪ್ರೊಫೆಸರ್ ರಾಜು ಕಪಾಲಿ, ಸುನೀತ ಸ್ವಾಗತಗೀತೆ ಹಾಡಿದರು. ಕಾರ್ಯಕ್ರಮ ನಿರೂಪಣೆಯನ್ನು ಗುರುದೇವಿ ಹಂಪನಗೌಡರ್, ಸ್ವಪ್ನ ಪೂಜಾರಿ ನಿರೂಪಿಸಿದರು. ಗೀತಾ ವಂದಿಸಿದರು.




# ತವನಿಧಿ ಪ್ರಶಸ್ತಿಗೆ ಶ್ರೀಶೈಲಗೌಡ ಆಯ್ಕೆ

ಉದಯರಶ್ಮಿ ನ್ಯೂಸ್

ಸಿಂದಗಿ: ಕಲಬುರಗಿ ಜಿಲ್ಲೆಯ ಯಡ್ರಾಮಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಜು.10ರಂದು ಸುಂಬಡದ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಅವರ 144ನೆಯ ಜಯಂತ್ಯೋತ್ಸವ ಪ್ರಯುಕ್ತ ಹಮ್ಮಿಕೊಳ್ಳುವ ಕಾರ್ಯಕ್ರಮದಲ್ಲಿ ಸಿಂದಗಿಯ ಬಿಎನ್‌ಬಿ ಫೌಂಡೇಶನ್ ಅಧ್ಯಕ್ಷರಾದ ಶ್ರೀಶೈಲಗೌಡ ಬಿರಾದಾರ ಅವರ ಸೇವೆಯನ್ನು ಗುರುತಿಸಿ ತವನಿಧಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕಸಾಪ ತಾಲೂಕಾಧ್ಯಕ್ಷ ನಾಗಪ್ಪ ಸಜ್ಜನ ತಿಳಿಸಿದ್ದಾರೆ.



# ಸಂಗಮೇಶ ಚೂರಿ ಗೆ ಪಾಟೀಲ ಪುಟ್ಟಪ್ಪ ಮಾಧ್ಯಮ ಪ್ರಶಸ್ತಿ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಹಿರಿಯ ಪತ್ರಕರ್ತ ಸಂಗಮೇಶ ಚೂ–ರಿಯವರನ್ನು ಆಯ್ಕೆ ಮಾಡಿದೆ ಎಂದು ರಾಜ್ಯ ಪತ್ರಕರ್ತರ ವೇದಿಕೆ ರಾಜ್ಯಾಧ್ಯಕ್ಷ ಮಹೇಶಬಾಬು ಸುರ್ವೆ ತಿಳಿಸಿದ್ದಾರೆ.

ಜು.7ರಂದು ರವಿವಾರ ಬೆಳಿಗ್ಗೆ 10 ಘಂಟೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಯನ ಸಭಾಂಗಣದಲ್ಲಿ ರಾಜ್ಯ ಪತ್ರಕರ್ತರ ವೇದಿಕೆ ಆಯೋಜನೆ ಮಾಡಿರುವ ಪತ್ರಿಕಾ ದಿನಾಚರಣೆಯಲ್ಲಿ

ಗಣ್ಯರಾದ ಸಂತೋಷ ಹೆಗಡೆ, ಮನು ಬಳಗಾರ, ಕಾನಿಪ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮುಂತಾದ ಗಣ್ಯರ ಸಮ್ಮುಖದಲ್ಲಿ ಸಂಗಮೇಶ ಚೂರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸುರ್ವೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಜು.7ರಂದು ವಿದ್ಯುತ್ ವ್ಯತ್ಯಯ

ಉದಯರಶ್ಮಿ ನ್ಯೂಸ್

ಸಿಂದಗಿ: ಜು.7ರಂದು ಸಿಂದಗಿ–ದೇವರಹಿಪ್ಪರಗಿ 110ಕೆವಿ ವಿದ್ಯುತ್ ಪ್ರಸರಣಾ ಜೋಡಿ ಮಾರ್ಗದಲ್ಲಿ ವಾಹಕಗಳ ಮತ್ತು ಗೋಪುರಗಳ ಬದಲಾವಣೆ ಕಾಮಗಾರಿ ಕೈಗೊಂಡಿರುವುದರಿಂದ ಬೆಳಿಗ್ಗೆ 9 ರಿಂದ ಸಾಯಂಕಾಲ 6ರ ವರೆಗೆ ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ 33ಕೆವಿ ಕಲಕೇರಿ ಫೀಡರ್, 33ಕೆವಿ ಗೋಲಗೇರಿ ಫೀಡರ್, ಮತ್ತು 11ಕೆವಿ ಬಂದಾಳ ಐಪಿ, 11ಕೆವಿ ಬ್ಯಾಕೋಡ ಫೀಡರ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸದರಿ ಮಾರ್ಗಗಳ ಮೇಲೆ ಬರುವ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಇಂಡಿ ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಎಂ ಕುರ್ಚಿ ಮೇಲೆ ಕಣ್ಣಿಟ್ಟವರಿಂದ ಮುಡಾ ಹಗರಣ ಬಯಲು!

ಉದಯರಶ್ಮಿ ನ್ಯೂಸ್

ಮೈಸೂರು: ಮುಖ್ಯಮಂತ್ರಿ ಕುರ್ಚಿ ಮೇಲೆ ಕಣ್ಣಿಟ್ಟವರಿಂದ ಮುಡಾ ಹಗರಣ ಬಯಲಾಗಿದೆ ಎಂದು ಕೇಂದ್ರ ಭಾರಿ ಕೈಗಾ–ರಿಕೆ ಹಾಗೂ ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಹಗರಣ ಇದೀಗ ಗಂಭೀರ ಸ್ವರೂಪ ಪಡೆಯುತ್ತಿದ್ದು, ವಿಪಕ್ಷಗಳು ಸರ್ಕಾರದ ಮೇಲೆ ಮುಗಿಬೀಳುತ್ತಿದೆ. ಇದೀಗ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಸ್ಫೋಟಕ ಹೇಳಿಕೆ ನೀಡಿದ್ದು, ಸಿಎಂ ಕುರ್ಚಿ ಮೇಲೆ ಕಣ್ಣಿಟ್ಟವರಿಂದ ಮುಡಾ ಹಗರಣ ಬಯಲಾಗಿದೆ ಎಂದು ಹೇಳಿದ್ದಾರೆ.


ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಷ್ಟು ದಿನ ಹೊರಗೆ ಬಾರದ ಹಗರಣ ಈಗ ಬಂದಿದ್ದು ಯಾಕೆ? ಇದರ ಹಿಂದೆ ಸಿಎಂ ಕುರ್ಚಿ ಮೇಲೆ ಟವಲ್ ಹಾಕಿರುವವರ ಪಾತ್ರವಿದೆ. ಬಿಜೆಪಿಯವರು ಹೋರಾಟ ಮಾಡುತ್ತಿದ್ದಾರೆ. ಆದರೆ ಹಗರಣ ಆಚೆ ಬರಲು ಕಾಂಗ್ರೆಸ್‌ನವರೇ ಒಳಗೆ ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ಆರೋಪಿಸಿದರು.

ಸಿಡಿ ಫ್ಯಾಕ್ಟರಿ ಕ್ಲೋಸ್ ಆಗಿದೆ, ಮುಡಾ ವಿಚಾರ ಶುರುವಾಗಿದೆ. ಈ ಬಗ್ಗೆ ನನಗೆ ಮಾಹಿತಿ ಇದೆ. ಸಿಎಂ ಪತ್ನಿಗೆ ಆ ಜಾಗ ಹೇಗೆ ಬಂತು ಎಂದೂ ನನಗೆ ಗೊತ್ತಿದೆ. 62 ಕೋಟಿ ರೂ. ಪರಿಹಾರ ಕೇಳುವ ಸಿಎಂ ಭೂಮಿ ಕಳೆದುಕೊಂಡು ಬೀದಿಯಲ್ಲಿ ನಿಂತಿರುವ ರೈತರಿಗೂ ಪರಿಹಾರ ಕೊಡಿಸಲಿ ಎಂದರು.



ಕಾನೂನು ಸಲಹೆಗಾರ ಈಗ ಎಂಎಲ್ ಎ ಆಗಿದ್ದಾರೆ. ಅವರು ಸಿಎಂ ಪರ ಸುದೀರ್ಘವಾಗಿ ಮಾತನಾಡಿದ್ದಾರೆ. 62 ಕೋಟಿ ರೂ ಪರಿಹಾರ ನೀಡಬೇಕು ಎಂದಿದ್ದಾರೆ. ಆದರೆ ಹಲವು ಅಭಿವೃದ್ಧಿ ಹೆಸ–ರಿನಲ್ಲಿ ಭೂ ಸ್ವಾಧೀನವಾಗಿದೆ. ಆ ರೈತರು ಇನ್ನೂ ಕೂಡ ಬೀದಿಯಲ್ಲಿ ಅಲೆದಾಡುತ್ತಿದ್ದಾರೆ. ಅವರಿಗೆ ರೇಟ್ ಫಿಕ್ಸ್ ಮಾಡುವಾಗ ಹೇಗೆ ಮಾಡುತ್ತೀರಾ? ರೈತರನ್ನು ಬೀದಿಗೆ ನಿಲ್ಲಿಸಿದ್ದೀರಿ ಇದು ಸರಿಯಾ? ನಿಮ್ಮ ಪತ್ನಿಯ ಹಣ ಕೇಳುತ್ತಿದ್ದೀರಲ್ಲಾ ಆ ದೇವರು ಮೆಚ್ಚುತ್ತಾನಾ ಎಂದು ಖಾರವಾಗಿ ಪ್ರಶ್ನಿಸಿದರು.

# ಬೆಕ್ಕು



## ಭಾವರಶ್ಮಿ



– ಗಣೇಶ್ ಜಗನ್ನಾಥ್
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ನಾನು ಮೈಸೂರಿನವಳು. ನನ್ನ ತಂದೆಗೆ ಸರಕಾರಿ ಉದ್ಯೋಗ. ನಾನೊಬ್ಬಳೇ ಮಗಳು. ನಮ್ಮ ಬಂದು ಬಾಂಧವರಲ್ಲಿ ಹೆಣ್ಣು ಮಕ್ಕಳೇ ಇಲ್ಲದ ಕಾರಣ ನಾನು ಎಲ್ಲರಿಗೂ ಅಚ್ಚುಮೆಚ್ಚು.

ನನಗೆ ಮದುವೆ ಮಾಡಲು ವರ ಹುಡುಕುತ್ತಿದ್ದರು. ಬೆಂಗಳೂರಿನ ಹುಡುಗ ನನಗೆ ಇಷ್ಟವಾದನು. ಅವರದು ಶ್ರೀಮಂತ ಕುಟುಂಬ. ತಂದೆ ಇಲ್ಲ. ಮನೆಯಲ್ಲಿ ತಾಯಿ ಮಗ ಇಬ್ಬರೇ. ಹುಡುಗನದು ಸ್ವಂತ ಉದ್ಯಮ.

*Engagement* ಆಯಿತು ಆದರೆ ಹುಡುಗನ ಕಡೆ ಮದುವೆ ಆರು ತಿಂಗಳ ನಂತರ ಎಂದುಬಿಟ್ಟರು.

ನನ್ನ ಭಾವೀ ಪತಿ ಆಗಾಗ ನಮ್ಮ ಮನೆಗೆ ಬರುತ್ತಿದ್ದರು. ಅವರ ಜತೆ ಒಡನಾಟ ನನಗೆ ಸರಾಗವಾಗಿ ಉಸಿರಾಡುವ ಹಾಗೆ ಆಗಿತ್ತು.

ಒಂದು ಬಾರಿ ನನ್ನನ್ನು ಮತ್ತು ನನ್ನ ಹೆತ್ತವರನ್ನು ತಮ್ಮ ಮನೆಗೆ ಬಂದು ಎರಡು ದಿನ ಇದ್ದು ಹೋಗಬೇಕೆಂದು ಕೇಳಿಕ್ಕೊಂಡರು. ಅವರ ಉದ್ದೇಶ ಮದುವೆಗೆ ಮುಂಚೆ ನಾನು ಅವರ ಮನೆ ಪರಿಸರಕ್ಕೆ ಹೊಂದಿಕ್ಕೊಳ್ಳಲೆಂದು . ಉದ್ದೇಶ ಒಳ್ಳೆಯದೇ ಅಲ್ಲವೇ.

ನನ್ನ ಹೆತ್ತವರೊಂದಿಗೆ ಬೆಂಗಳೂರಿಗೆ ಅದೂ ನಾನು ಬಾಳುವ ಮನೆಗೆ ಬಂದೆನು. ವಿಶಾಲವಾದ ಮನೆ, ಮನೆಯ ಮುಂದೆ ಸಾಕಷ್ಟು ಜಾಗ ಹಾಗೂ ಅದರಲ್ಲಿ ಕೈತೋಟ. ಮನೆಯ ನೋಡಿಕ್ಕೊಳಲು ಒಬ್ಬ ಸೆಕ್ಯೂರಿಟಿ. ನನಗೆ ಪರಿಸರ ಬಹಳ ಹಿಡಿಸಿತು.

ನನಗೆ ತಿಳಿದ ಹಾಗೆ ಆ ಮನೆಯಲ್ಲಿ ಇಬ್ಬರೇ ಇರಬೇಕಿತ್ತು, ತಾಯಿ ಮತ್ತು ಮಗ. ಆದರೆ ಇದ್ದದ್ದು ನಾಲ್ಕು ಮಂದಿ. ತಾಯಿ, ಮಗ ಮತ್ತು ಎರಡು ಬೆಕ್ಕುಗಳು.

ಸೆಕ್ಯೂರಿಟಿ ಜತೆ ಮಾತನಾಡುವಾಗ ತಿಳಿಯಿತು ತಾಯಿ ಮಗ ಇಬ್ಬ–ರಿಗೂ ಬೆಕ್ಕುಗಳೆಂದರೆ ಬಹಳ ಪ್ರೀತಿ ಎಂದು.

ಮದುವೆಯಾಗಿ ಗಂಡನ ಮನೆ ಸೇರಿದೆ. ಪರಿಸರಕ್ಕೆ ಹೊಂದಿಕೊಳ್ಳುವುದು ಅಷ್ಟೇನೂ ಕಷ್ಟವಾಗಲಿಲ್ಲ. ಆದರೆ ತಾಯಿ ಮಗನಿಗೆ ಬೆಕ್ಕುಗಳ ಮೇಲಿರುವ ಅತಿಯಾದ ಪ್ರೀತಿ ನನಗೆ ಸ್ವಲ್ಪ ಕಿರಿಕಿರಿ ಎನಿಸುತ್ತಿತ್ತು.

ಬೆಕ್ಕು ಸ್ವಭಾವತಃ ಸೋಂಬೇರಿ ಪ್ರಾಣಿ. ದಿನದ ಬಹಳಷ್ಟು ಸಮಯ ನಿದ್ದೆಮಾಡುತ್ತದೆ. ಅದು ಯಾರ ಮಾತನ್ನು ಕೇಳುವುದಿಲ್ಲ. ಆಗಾಗ ಅದನ್ನು ಮುದ್ದು ಮಾಡುತ್ತಿರಬೇಕು. ಇಲ್ಲವಾದರೆ ಕೋಪಿಸಿಕೊಳ್ಳುವುದು. ಅದರ ಈ ಸ್ವಭಾವವೇ ಸಾಕುವವ–ರಿಗೆ ಅಚ್ಚುಮೆಚ್ಚು.

ಒಂದು ದಿನ ನಮ್ಮ ಮನೆಗೆ ಬೇರೊಂದು ಬೆಕ್ಕು ಬಂದುಬಿಟ್ಟಿತು. ಅದೂ ಗರ್ಭಿಣಿ ಬೇರೆ. ಅದಕ್ಕೆ ಕಾರಣ ನಮ್ಮ ಮನೆಯ ಒಂದು ಬೆಕ್ಕು. ತಾಯಿ ಮಗನ ಆನಂದ ಹೇಳತೀರದು. ಅದಕ್ಕೆ ಆರೈಕೆ ಮಾಡಿದ್ದೇ ಮಾಡಿದ್ದು. ಸೆಕ್ಯೂ–ರಿಟಿಯಿಂದ ತಿಳಿಯಿತು ಆ ಬೆಕ್ಕು ನಮ್ಮ ಬೀದಿಯಿಂದ ನಾಲ್ಕು ಬೀದಿ ಆಚೆ ಇರುವ ಬೀದಿಯದೆಂದು. ಇರುವ ಬೆಕ್ಕುಗಳೇ ಸಾಕು ಎಂದು ಹೊಸ ಬೆಕ್ಕನ್ನು ಓಡಿಸಿಬಿಟ್ಟೆ. ಇಲ್ಲವಾದರೆ ತಾಯಿ ಮಗ ಇಬ್ಬರು ಅದನ್ನು ಮನೆಯಲ್ಲಿಯೇ ಇಟ್ಟುಕೊಂಡುಬಿಟ್ಟಿರುವವರು.

ಒಂದು ದಿನ ಹೊರಗಿನಿಂದ ಮನೆಗೆ ಬಂದೆ. ಮನೆಯಲ್ಲಿ ಯಾರೂ ಇಲ್ಲ. ಸೆಕ್ಯುರಿಟಿ ಹೇಳಿದ ಹೊಸ ಬೆಕ್ಕು ನಾಲ್ಕು ಮರಿ ಹಾಕಿದೆ, ಅದನ್ನು ನೋಡಲು ತಾಯಿ ಮಗ ಹೋಗಿದ್ದಾರೆಂದು. ಇವರ ಬೆಕ್ಕಿನ ಮೇಲಿನ ಪ್ರೀತಿಗೆ ಏನು ಹೇಳಬೇಕೋ ತೋಚಲಿಲ್ಲ.

ಒಂದು ತಿಂಗಳ ನಂತರ ಎರಡು ಮರಿಗಳನ್ನು ತಂದರು ಸಾಕಲು. ಈಗ ನಮ್ಮ ಮನೆಯಲ್ಲಿ ನಾಲ್ಕು ಬೆಕ್ಕುಗಳಿವೆ. ದಿನ ಕಳೆದಂತೆ ನನಗೂ ಬೆಕ್ಕಿನ ಮೇಲೆ ಪ್ರೀತಿ.

ಒಂದು ದಿನ ಮನೆಗೆ ಬಂದಾಗ ಅತ್ತೆಯವರನ್ನು ಬಿಟ್ಟು ಯಾರೂ ಇಲ್ಲ. ವಿಚಾರಿಸಿದಾಗ ತಿಳಿಯಿತು ಮಗ ಉದ್ಯಮ ನೋಡಲು ಹೋಗಿರುವುದಾಗಿ ಮತ್ತು ಅವರೊಂದಿಗೆ ಕಾರಿನಲ್ಲಿ ಬೆಕ್ಕುಗಳೂ ಹೋಗಿವೆಯೆಂದು. ಮನೆ ಬಿಕೋ ಎನ್ನುತ್ತಿದೆ. ಅತ್ತೆ ಸುಮ್ಮನೆ ಕುಳಿತಿದ್ದಾರೆ. ನನಗೆ ಸಹಿಸಲಾಗಲಿಲ್ಲ. ಒಂದು ಕ್ಯಾಬ್ ಬುಕ್ ಮಾಡಿದೆ. ಉದ್ಯಮಕ್ಕೆ ಹೋಗಿ ಬೆಕ್ಕುಗಳನ್ನೆಲ್ಲ ಮನೆಗೆ ಕರೆತಂದುಬಿಟ್ಟೆ. ನನ್ನ ವರ್ತನೆ ತಂದಿತು ಅತ್ತೆಗೆ ಸಂತಸ.

ಬೆಕ್ಕು ಸಾಕಿರುವವರಿಗೆ ಗೊತ್ತು ಅದರ ಅನುಭವ.



## ಸ್ವರಾಕ್ಷರ ಕವನ

## ಹೀಗೆ ಬದುಕು


ಅ– ಅಂದವಿದೆ ಈ ಬದುಕು
ಆ ಆಹ್ಲಾದದ ಈ ಸರಕು ಇ– ಇಷ್ಟಪಟ್ಟು ವಿನಿಯೋಗಿಸು
ಈ– ಈಶ್ವರನ ಆಶೀರ್ವಾದವನ್ನು ಉ, ಉಂಡಾಡಿ
ಗುಂಡನಾಗದಿರು ಊ– ಊರು ಇಲ್ಲಿಲ್ಲ ಮೇಲಿದೆ.
ಋ– ಋಷಿಯಾಗು ಖುಷಿಯಾಗಲು
ಎ– ಎಲೆ ಮರುಳೆ ಇಲ್ಲಿ ನೀನೇ ನಿರುಪಮಾದ್ಭುತ
ಏ– ಏಕೆ ಬಂದಿರುವೆ ತರ್ಕಿಸು
ಐ– ಐಷಾರಾಮಿಗಾಗಿ ಮೋಸ ಮಾಡದಿರು ಒ ಒಳಗೊಳಗೆ
ಚಿಂತಿಸಿ ಚಿತೆ ಏರದಿರು
ಓ– ಓ ನರನೇ ನಿಯತ್ತಿನ ನಿಷ್ಕರ್ಷವಾಗು
ಔ– ಔದಾರ್ಯ ತೋರುವ ಪ್ರಕೃತಿಯಂತಾಗು ಅಂ– ಅಂಕಿತವಾಗು
ಕಳಂಕಿತವಲ್ಲ
ಅ. 'ಅ' ಯಾರೂ ಬಳಸದ 'ಯೋಗವಾಹ' ದಂತಾಗು.

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

–ಡಾ. ರಾಜಶೇಖರ ನಾಗೂರ
("ನಮ್ಮ ಕಥಾ ಅರಮನೆ"





**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR